ಸಂಪುಟ : 11 ಸಂಚಿಕೆ : 140 ಪುಟ : 4+2 ಬೆಲೆ : 3.00 ರವಿವಾರ ಜುಲೈ 5, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 140 Pages : 4+2 Rate : 3.00 Sunday July 5, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

### ಎಂಪಿಎಲ್‌ಎಡಿಎಸ್ ಕಾಮಗಾರಿಗಳ ವಿಳಂಬಕ್ಕೆ ಸಂಸದ ಬಸವರಾಜ ಬೊಮ್ಮಾಯಿ ತೀವ್ರ ಅಸಮಾಧಾನ

# ಒಂದು ವಾರದಲ್ಲಿ ಕಾಮಗಾರಿ ಪ್ರಗತಿ ತೋರಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಸಂಸತ್ ಸದಸ್ಯರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆ (ಒಕ-ಐಂಆಖ) ಅಡಿಯಲ್ಲಿ ಗದಗ ಜಿಲ್ಲೆಯಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಾಮಗಾರಿಗಳ ವಿಳಂಬಕ್ಕೆ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿ ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಒಂದು ವಾರದೊಳಗೆ ಬಾಕಿ ಇರುವ ಎಲ್ಲಾ ಪ್ರಗತಿ ವರದಿಗಳನ್ನು ಸಲ್ಲಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶನಿವಾರ ನಡೆದ ಎಂಪಿಎಲ್‌ಎಡಿಎಸ್ ಹಾಗೂ ಸಂಸದರ ಆದರ್ಶ ಗ್ರಾಮ ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

2024–25 ಹಾಗೂ 2025–26ನೇ ಸಾಲಿನ ಅನುದಾನದಡಿ ಒಟ್ಟು 35 ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದ್ದು, ಇದುವರೆಗೆ ಕೇವಲ 8 ಕಾಮಗಾರಿಗಳು ಮಾತ್ರ ಪೂರ್ಣಗೊಂಡಿವೆ. 11 ಕಾಮಗಾರಿಗಳಿಗೆ ಅಂದಾಜು ಪತ್ರಿಕೆ ಸಲ್ಲಿಕೆಯಾಗದೇ ಹಾಗೂ 16 ಕಾಮಗಾರಿಗಳಿಗೆ ಎರಡನೇ ಹಂತದ ಅನುದಾನ ಬಿಡುಗಡೆಗೆ ಅಗತ್ಯ ಪ್ರಸ್ತಾವನೆ ಸಲ್ಲಿಸದೇ ಅಧಿಕಾರಿಗಳು ವಿಳಂಬ ಮಾಡಿರುವುದನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

ಸಾರ್ವಜನಿಕರ ಹಣ ವ್ಯರ್ಥವಾಗದಂತೆ ಆರ್‌ಟಿಸಿ, ಈ–ಸ್ವತ್ತು, ಆಸ್ತಿ ದಾಖಲೆ ಹಾಗೂ ಕಟ್ಟಡ ನಿರ್ಮಾಣ ಪರವಾನಗಿ ಸಂಬಂಧಿತ ತಾಂತ್ರಿಕ ಸಮಸ್ಯೆಗಳನ್ನು ತಕ್ಷಣ ಪರಿಹರಿಸಿ, ಒಂದು ವಾರದೊಳಗೆ ಎಲ್ಲಾ ದಾಖಲೆಗಳನ್ನು ಸರಿಪಡಿಸಿ ವರದಿ ಸಲ್ಲಿಸಬೇಕು ಎಂದು ಸೂಚಿಸಿದರು.

> “ಒಂದು ವಾರದೊಳಗೆ ದಾಖಲೆಗಳನ್ನು ಪೂರ್ಣಗೊಳಿಸಿ ಕಾಮಗಾರಿಗಳಿಗೆ ವೇಗ ನೀಡಿ. ವಿಳಂಬ ಮುಂದುವರಿದರೆ ಅನುದಾನ ರದ್ದುಪಡಿಸಿ ಬೇರೆ ಕಾಮಗಾರಿಗಳಿಗೆ ಮರುಹಂಚಿಕೆ ಮಾಡಲಾಗುವುದು.”
>
> **–ಬಸವರಾಜ ಬೊಮ್ಮಾಯಿ, ಸಂಸದ, ಹಾವೇರಿ–ಗದಗ ಲೋಕಸಭಾ ಕ್ಷೇತ್ರ**

ಸಭೆಯಲ್ಲಿ ಚರ್ಚೆಯಾದ ಐದು ಪ್ರಮುಖ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಗುತ್ತಿಗೆದಾರರು ಅಥವಾ ಅನುಷ್ಠಾನ ಸಂಸ್ಥೆಗಳು ನಿಗದಿತ ಅವಧಿಯಲ್ಲಿ ಅಗತ್ಯ ದಾಖಲೆಗಳನ್ನು ಸಲ್ಲಿಸದಿದ್ದರೆ, ಆ ಕಾಮಗಾರಿಗಳ ಅನುದಾನವನ್ನು ರದ್ದುಪಡಿಸಿ ಬೇರೆ ಅಗತ್ಯ ಕಾಮಗಾರಿಗಳಿಗೆ ಮರುಹಂಚಿಕೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮುಂಡರಗಿ ತಾಲೂಕಿನ ಡೋಣಿ ಗ್ರಾಮದ ದುರ್ಗಾದೇವಿ ದೇವಸ್ಥಾನದ ಸಭಾಭವನ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದ ಕಂಪ್ಯೂಟರ್ ಉತಾರದಲ್ಲಿನ ತಾಂತ್ರಿಕ ದೋಷಗಳನ್ನು ಸರಿಪಡಿಸಿ, ನಿಯಮಾನುಸಾರ ಕಾಮಗಾರಿ ಆರಂಭಿಸಲು ಕಂದಾಯ ಅಧಿಕಾರಿಗಳಿಗೆ ಸೂಚಿಸಿದರು. ವಿವಿಧ ಗ್ರಾಮಗಳ ಸ್ಮಶಾನ ವೈರಾಗ್ಯ ಧಾಮ, ಅಂಬೇಡ್ಕರ್ ಭವನ ಹಾಗೂ ಸಮುದಾಯ ಭವನಗಳ ಕಾಮಗಾರಿಗಳಿಗೆ ಅಗತ್ಯ ದಾಖಲೆ ಮತ್ತು ನಿರಾಕ್ಷೇಪಣಾ ಪತ್ರಗಳನ್ನು ಶೀಘ್ರವಾಗಿ ಪಡೆಯುವಂತೆ ನಿರ್ದೇಶಿಸಿದರು.

ಕೇಂದ್ರ ಸರ್ಕಾರದ ದರ್ಪಣ್ ಪೋರ್ಟಲ್ ನಲ್ಲಿ ಎಲ್ಲಾ ಕಾಮಗಾರಿಗಳ ಜಿಪಿಎಸ್ ಮಾಹಿತಿ ಹಾಗೂ ಪ್ರಗತಿ ವಿವರಗಳನ್ನು ಕಾಲಕಾಲಕ್ಕೆ ಕಡ್ಡಾಯವಾಗಿ ನವೀಕರಿಸುವಂತೆ ಸೂಚಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಸಂಸದರು ನೀಡಿರುವ ಸೂಚನೆಗಳನ್ನು ಗಂಭೀರವಾಗಿ ಅನುಷ್ಠಾನಗೊಳಿಸಲಾಗುವುದು. ಒಂದು ವಾರದೊಳಗೆ ಬಾಕಿ ಇರುವ ಎಲ್ಲಾ ಅಂದಾಜು ಪತ್ರಿಕೆ ಹಾಗೂ ಪ್ರಸ್ತಾವನೆಗಳನ್ನು ಸಲ್ಲಿಸಬೇಕು. ತಾಂತ್ರಿಕ ನೆಪ ಹೇಳಿ ಕಾಮಗಾರಿಗಳನ್ನು ವಿಳಂಬಗೊಳಿಸುವುದನ್ನು ಸಹಿಸುವುದಿಲ್ಲ. ಕರ್ತವ್ಯಲೋಪ ಎಸಗುವ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರು, ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ವಿವಿಧ ಇಲಾಖೆಗಳ ಕಾರ್ಯಪಾಲಕ ಅಭಿಯಂತರರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

---

#### ಎಸ್‌ಐಆರ್ ಪರಿಷ್ಕರಣೆ ಚುರುಕು

## 5.18 ಲಕ್ಷ ಎನ್ಯುಮರೇಷನ್ ಫಾರ್ಮ್ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್–2026) ಕಾರ್ಯ ಚುರುಕುಗೊಂಡಿದ್ದು, ಜುಲೈ 3ರ ವೇಳೆಗೆ 5,18,122 ಎನ್ಯುಮರೇಷನ್ ಫಾರ್ಮ್‌ಗಳನ್ನು ಮತದಾರರಿಗೆ ವಿತರಿಸಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳು ಇದ್ದು, ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಜುಲೈ 29ರವರೆಗೆ ಮನೆ–ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಿದ್ದಾರೆ.

ಈವರೆಗೆ 15,730 ಎನ್ಯುಮರೇಷನ್ ಫಾರ್ಮ್‌ಗಳನ್ನು ಡಿಜಿಟಲೀಕರಣ ಮಾಡಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ. ಸಾರ್ವಜನಿಕರು ಬಿಎಲ್‌ಒಗಳಿಗೆ ಅಗತ್ಯ ಮಾಹಿತಿಯನ್ನು ನೀಡಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆಗೆ ಸಹಕರಿಸುವಂತೆ ಮನವಿ ಮಾಡಲಾಗಿದೆ.

---

## ಇಂದು ರಾಜ್ಯಮಟ್ಟದ ಕಾರ್ಯಾಗಾರ

**ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಹಾಗೂ ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ತಿನ ಸಂಯುಕ್ತ ಆಶ್ರಯದಲ್ಲಿ ಬಂಜಾರ ಥಾಡಿ, ಥಾಲಿಯಾ, ಸನಾರ, ನಾವಿ ಮತ್ತು ಭರಾವಾ ಸಮುದಾಯಗಳ ರಾಜ್ಯಮಟ್ಟದ ಕಾರ್ಯಾಗಾರ ಹಾಗೂ ವಿಚಾರ ಸಂಕಿರಣವನ್ನು ಜುಲೈ 5ರಂದು ಗದಗ ತಾಲೂಕಿನ ಬೆಳಧಡಿ ತಾಂಡಾ (ಬ್ರಹ್ಮಾನಂದಪುರ) ಕಂಕಾಳಿ ಕಾಳಿಕಾದೇವಿ ದೇವಸ್ಥಾನದಲ್ಲಿ ಆಯೋಜಿಸಲಾಗಿದೆ.

ಬೆಳಿಗ್ಗೆ 11 ಗಂಟೆಗೆ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಅಧ್ಯಕ್ಷ ಡಾ. ಮೋತಿಲಾಲ ಆರ್. ಚವ್ಹಾಣ ಕಾರ್ಯಕ್ರಮ ಉದ್ಘಾಟಿಸಲಿದ್ದು, ಗದಗ ಶಾಸಕ ಡಾ. ಎಚ್. ಕೆ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ. ಇದೇ ವೇಳೆ ಡಾ. ಸುರೇಖಾ ರಾಠೋಡ್ ರಚಿಸಿರುವ ಸನಾರ ಕೃತಿ ಬಿಡುಗಡೆಗೊಳ್ಳಲಿದೆ.

ಮಧ್ಯಾಹ್ನ ಮತ್ತು ಸಂಜೆ ನಡೆಯುವ ವಿಚಾರ ಸಂಕಿರಣದಲ್ಲಿ ಬಂಜಾರ ಸಮುದಾಯಗಳ ಇತಿಹಾಸ, ಸಂಸ್ಕೃತಿ ಹಾಗೂ ಕಲಾ ಪರಂಪರೆ ಕುರಿತು ಉಪನ್ಯಾಸಗಳು ನಡೆಯಲಿದ್ದು, ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

---

#### ಶ್ರೀ ವೀರೇಶ್ವರ ಪುಣ್ಯಾಶ್ರಮ, ದುರ್ಗಾದೇವಿ ರಥಗಳ ಮೇಲಿನ ವಿವಾದಿತ ಹೆಸರು ತೆರವಿಗೆ ಜಿಲ್ಲಾಧಿಕಾರಿಗೆ ಮನವಿ

## ಧಾರ್ಮಿಕ ಸಾಮರಸ್ಯಕ್ಕೆ ಪೀರಸಾಬ್ ಕೌತಾಳ ಮುನ್ನಡೆ



> “ಯಾವುದೇ ವ್ಯಕ್ತಿ ಅಥವಾ ಸಂಘಟನೆಯನ್ನು ಗುರಿಯಾಗಿಸುವ ಉದ್ದೇಶ ನಮ್ಮದಲ್ಲ. ಶ್ರೀ ವೀರೇಶ್ವರ ಪುಣ್ಯಾಶ್ರಮ ಮಠ ಹಾಗೂ ದುರ್ಗಾದೇವಿ ದೇವಸ್ಥಾನದ ಘನತೆ, ಭಕ್ತರ ಧಾರ್ಮಿಕ ಭಾವನೆ ಮತ್ತು ಸಾಮಾಜಿಕ ಸೌಹಾರ್ದ ಕಾಪಾಡುವ ದೃಷ್ಟಿಯಿಂದ ಮಾತ್ರ ಈ ಮನವಿ ಸಲ್ಲಿಸಿದ್ದೇವೆ.”
>
> **–ಪೀರಸಾಬ್ ಎ. ಕೌತಾಳ**

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದಲ್ಲಿ ಧಾರ್ಮಿಕ ಸಾಮರಸ್ಯ ಹಾಗೂ ದೇವಾಲಯಗಳ ಘನತೆ ಕಾಪಾಡುವ ನಿಟ್ಟಿನಲ್ಲಿ ಸಮಾಜಮುಖಿ ಕಾರ್ಯಕರ್ತ ಪೀರಸಾಬ್ ಎ. ಕೌತಾಳ ಅವರು ಮಹತ್ವದ ಹೆಜ್ಜೆಯಿಟ್ಟಿದ್ದು, ಶ್ರೀ ವೀರೇಶ್ವರ ಪುಣ್ಯಾಶ್ರಮದ ಹಾಗೂ ಗಂಗಾಪುರ ಪೇಟೆಯ ದುರ್ಗಾದೇವಿ ದೇವಸ್ಥಾನದ ರಥಗಳ ಗಾಲಿಗಳ ಮೇಲೆ ಕೆತ್ತಲಾಗಿರುವ ವಿವಾದಿತ ಹೆಸರನ್ನು ತೆರವುಗೊಳಿಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ. 3ನೇ ಪುಟಕ್ಕೆ.....

---

#### ರೂ. 10 ಲಕ್ಷ ಕರದಾತರ ಹಣದಲ್ಲಿ ಮೋಜು–ಮಜಾ; ವೆಚ್ಚವನ್ನು ವಸೂಲಿ ಮಾಡಿ'– ದಾವಲ ಎಂ. ಮುಳಗುಂದ ಆರೋಪ

## ಎಸ್‌ಐಆರ್ ಜಾರಿಯಲ್ಲೇ ನಗರಸಭೆ ಅಧಿಕಾರಿಗಳ ಇಂದೋರ್ ಪ್ರವಾಸ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ನಡೆಯುತ್ತಿರುವ ಸಂದರ್ಭದಲ್ಲೇ ಗದಗ–ಬೆಟಗೇರಿ ನಗರಸಭೆಯ ಪೌರಾಯುಕ್ತರು, ಸಿಬ್ಬಂದಿ ಹಾಗೂ ಕೆಲ ಸದಸ್ಯರು ಕಸ ವಿಲೇವಾರಿ ಅಧ್ಯಯನದ ಹೆಸರಿನಲ್ಲಿ ಇಂದೋರ್‌ಗೆ ತೆರಳಿರುವುದನ್ನು ಖಂಡಿಸಿರುವ ಗದಗ ಜಿಲ್ಲಾ ಹೆಚ್.ಡಿ. ಕುಮಾರಸ್ವಾಮಿ ಬಳಗದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಾವಲ ಎಂ. ಮುಳಗುಂದ, ಇದು ಕರ್ತವ್ಯಲೋಪವಾಗಿದ್ದು ಕರದಾತರ ಹಣದ ದುರ್ಬಳಕೆ ಎಂದು ಆರೋಪಿಸಿದ್ದಾರೆ.

> “ನಗರದಲ್ಲಿ ಕಸದ ಸಮಸ್ಯೆ ಬಗೆಹರಿಸದೆ ಅಧ್ಯಯನ ಪ್ರವಾಸದ ಹೆಸರಿನಲ್ಲಿ ಕರದಾತರ ಹಣ ವ್ಯಯ ಮಾಡಿರುವುದು ಖಂಡನೀಯ. ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡು ವೆಚ್ಚವನ್ನು ಅವರಿಂದಲೇ ವಸೂಲಿ ಮಾಡಬೇಕು.”
>
> **–ದಾವಲ ಎಂ. ಮುಳಗುಂದ, ಜಿಲ್ಲಾ ಪ್ರಧಾನ ಕಾರ್ಯದರ್ಶಿ, ಹೆಚ್.ಡಿ. ಕುಮಾರಸ್ವಾಮಿ ಬಳಗ, ಗದಗ**



ಅವರು ನೀಡಿರುವ ಪತ್ರಿಕಾ ಪ್ರಕಟಣೆಯಲ್ಲಿ ಆರೋಪಿಸಿದ್ದು,

ನಗರದಲ್ಲಿ ರಸ್ತೆಗಳ ಮೇಲೆ ಕಸ ರಾಶಿ ಬಿದ್ದಿದ್ದು, ದುರ್ವಾಸನೆ ಹರಡುತ್ತಿದ್ದರೂ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ನಗರವನ್ನು ಬಿಟ್ಟು ಇಂದೋರ್‌ನಲ್ಲಿ ವಾಸ್ತವ್ಯ ಹೂಡಿದ್ದಾರೆ ಎಂದು ಟೀಕಿಸಿದ್ದಾರೆ.

3ನೇ ಪುಟಕ್ಕೆ.....

---

#### ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಪಾಲ್ಗೊಳ್ಳಲು ಕರೆ

## ವಿದ್ಯಾರ್ಥಿಗಳ ಜಾಗೃತಿ ಜಾಥಾ ಮೂಲಕ ಎಸ್‌ಐಆರ್ ಅರಿವು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್2026) ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ತಾಲೂಕು ಸ್ವೀಪ್ ಸಮಿತಿ ಹಾಗೂ ತಾಲೂಕು ಆಡಳಿತದ ಸಹಯೋಗದಲ್ಲಿ ಶನಿವಾರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳಿಂದ ಜಾಗೃತಿ ಜಾಥಾ ನಡೆಸಲಾಯಿತು.

ಪಟ್ಟಣದ ವಿದ್ಯಾರಣ್ಯ ಸರ್ಕಲ್‌ನಲ್ಲಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಸಹಾಯಕ ನಿರ್ದೇಶಕ ಕೃಷ್ಣಪ್ಪ ಧರ್ಮರ ಹಸಿರು ನಿಶಾನೆ ತೋರಿಸುವ ಮೂಲಕ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿ, ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ–ಮನೆಗೆ ತೆರಳಿ ಎಸ್‌ಐಆರ್ ನಮೂನೆಗಳನ್ನು ವಿತರಿಸುತ್ತಿದ್ದು, 3ನೇ ಪುಟಕ್ಕೆ.....

> “ಸರಿಯಾದ ಮತ್ತು ನಿಖರ ಮತದಾರರ ಪಟ್ಟಿಯಿಂದ ಮಾತ್ರ ಬಲಿಷ್ಠ ಪ್ರಜಾಪ್ರಭುತ್ವ ನಿರ್ಮಾಣ ಸಾಧ್ಯ. ಮತದಾನವು ಪ್ರತಿಯೊಬ್ಬ ನಾಗರಿಕನ ಹಕ್ಕು ಮಾತ್ರವಲ್ಲ, ಜವಾಬ್ದಾರಿಯೂ ಆಗಿದೆ.”
>
> **–ಕೃಷ್ಣಪ್ಪ ಧರ್ಮರ, ಸಹಾಯಕ ನಿರ್ದೇಶಕರು, ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ**

---

#### ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಗೆ ದುರ್ಗಮ್ಮ ಬಿಜವಾಡ ಮಹಾಪೌರ, ನಾಝುರೆ

## ರತ್ನಾಬಾಯಿ ಉಪಮಹಾಪೌರರಾಗಿ ಆಯ್ಕೆ



**ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆಯ 25ನೇ ಅವಧಿಯ ಮಹಾಪೌರರಾಗಿ 69ನೇ ವಾರ್ಡ್ ಸದಸ್ಯೆ ದುರ್ಗಮ್ಮ ಶಶಿಕಾಂತ ಬಿಜವಾಡ ಹಾಗೂ ಉಪಮಹಾಪೌರರಾಗಿ 9ನೇ ವಾರ್ಡ್ ಸದಸ್ಯೆ ನಾಝುರೆ ರತ್ನಾಬಾಯಿ ಏಕನಾಥ ಆಯ್ಕೆಯಾಗಿದ್ದಾರೆ.

ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾ ಅಧ್ಯಕ್ಷಾಧಿಕಾರಿಯಾಗಿದ್ದ ಕೆ.ಎಂ. ಜಾನಕಿ ಅವರು ಫಲಿತಾಂಶವನ್ನು ಅಧಿಕೃತವಾಗಿ ಘೋಷಿಸಿದರು.

ಮಹಾಪೌರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ದುರ್ಗಮ್ಮ ಬಿಜವಾಡ ಅವರು 50 ಮತಗಳನ್ನು ಪಡೆದು ವಿಜಯಶಾಲಿಯಾದರೆ, ಪ್ರತಿಸ್ಪರ್ಧಿ 20ನೇ ವಾರ್ಡ್ ಸದಸ್ಯೆ ಕವಿತಾ ದಾನಪ್ಪ ಕಬ್ಬೇರ ಅವರು 35 ಮತಗಳನ್ನು ಪಡೆದರು.

ಉಪಮಹಾಪೌರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ನಾಝುರೆ ರತ್ನಾಬಾಯಿ ಏಕನಾಥ ಅವರು 50 ಮತಗಳನ್ನು ಪಡೆದು ಆಯ್ಕೆಯಾದರು. ಅವರ ವಿರುದ್ಧ ಣ3ನೇ ಪುಟಕ್ಕೆ.....

ನೀರು ಸಂರಕ್ಷಣೆ, ಸ್ವಚ್ಛತೆ ಹಾಗೂ ಸಾಂಕ್ರಾಮಿಕ ರೋಗ ತಡೆಗೆ ಅಧಿಕಾರಿಗಳಿಗೆ ಡಿಸಿ ಕಟ್ಟುನಿಟ್ಟಿನ ಸೂಚನೆ

# ಮಳೆಗಾಲದಲ್ಲಿ ಕುಡಿಯುವ ನೀರು, ಆರೋಗ್ಯಕ್ಕೆ ಮೊದಲ ಆದ್ಯತೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**



ಮಳೆಗಾಲದಲ್ಲಿ ಕುಡಿಯುವ ನೀರಿನ ಲಭ್ಯತೆ, ಸ್ವಚ್ಛತೆ ಹಾಗೂ ಸಾರ್ವಜನಿಕ ಆರೋಗ್ಯ-ಕ್ಕೆ ಮೊದಲ ಆದ್ಯತೆ ನೀಡಬೇಕು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅಧಿಕಾರಿಗಳಿಗೆ ಸೂಚನೆ ನೀಡಿದರು.

ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ವಿಡಿಯೋ ಸಂವಾದದ ಮೂಲಕ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಮುಂದಿನ ದಿನಗಳಲ್ಲಿ ನೀರಿನ ಅಭಾವ ಉಂಟಾಗುವ ಸಾಧ್ಯತೆ ಇರುವುದರಿಂದ ಈಗಿನಿಂದಲೇ ನೀರಿನ ಸಂರಕ್ಷಣೆಗೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕಾಲುವೆ ಹಾಗೂ ಕೆರೆಗಳ ನೀರನ್ನು ಕುಡಿಯುವ ಉದ್ದೇಶಕ್ಕೆ ಮಾತ್ರ ಬಳಸುವಂತೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ನೀರನ್ನು ಅನಗತ್ಯವಾಗಿ ವ್ಯರ್ಥ ಮಾಡದಂತೆ ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಜಿಲ್ಲೆಯಲ್ಲಿ ಚಿಕನ್‌ಗುನ್ಯಾ ಹಾಗೂ ಮಲೇರಿಯಾ ಹರಡದಂತೆ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ದೇವಾಲಯಗಳು ಹಾಗೂ ಬಸ್ ನಿಲ್ದಾಣಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ ಮತ್ತು ಸ್ವಚ್ಛತಾ ವ್ಯವಸ್ಥೆ ಕಲ್ಪಿಸಬೇಕು. ಕುಡಿಯುವ ನೀರಿನ ಸೋರಿಕೆ ಕಂಡುಬಂದ ತಕ್ಷಣ ಸಂಬಂಧಿತ ಇಲಾಖೆಗಳು ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರಿಗೆ ಹೊಸ ಬೋರ್‌ವೆಲ್ ಕೊರೆಸಲು ಅನುಮತಿ ನೀಡಬಾರದು ಎಂದು ತಿಳಿಸಿದರು.

ಮಳೆಗಾಲದಲ್ಲಿ ಸಿಡಿಲು ಬಡಿತದ ಅಪಾಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು. ಜನ, ಜಾನುವಾರು ಹಾಗೂ ಆಸ್ತಿ-ಪಾಸ್ತಿಗಳಿಗೆ ಹಾನಿಯಾಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಲು ತಿಳಿಸಬೇಕು. ಪಿಡಿಒಗಳು ಹಾಗೂ ಗ್ರಾಮ ಸಹಾಯಕರು ಮಳೆಮಾಪಕ (ರೇನ್‌ಗೇಜ್) ಸಾಧನಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಸೂಚಿಸಿದರು.

ಕೃಷಿ ಇಲಾಖೆಯು ಪ್ರತಿಯೊಬ್ಬ ರೈತನಿಗೂ ಬೆಳೆ ವಿಮೆ ಕುರಿತು ಮಾಹಿತಿ ತಲುಪಿಸಬೇಕು. ಯಾವುದೇ ರೈತ ಬೆಳೆ ವಿಮೆಯಿಂದ ವಂಚಿತರಾಗದಂತೆ ಕ್ರಮ ಕೈಗೊಳ್ಳುವಂತೆ ತಹಶೀಲ್ದಾರರಿಗೆ ನಿರ್ದೇಶನ ನೀಡಿದರು.

> "ಮಳೆಗಾಲದಲ್ಲಿ ಕುಡಿಯುವ ನೀರಿನ ಸಂರಕ್ಷಣೆ, ಸ್ವಚ್ಛತೆ ಹಾಗೂ ಸಾರ್ವಜನಿಕ ಆರೋಗ್ಯದ ಬಗ್ಗೆ ಯಾವುದೇ ನಿರ್ಲಕ್ಷ್ಯ ಸಹಿಸಲಾಗದು. ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಜನರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು."
> **-ಸ್ನೇಹಲ್ ಆರ್., ಜಿಲ್ಲಾಧಿಕಾರಿ, ಧಾರವಾಡ**

ಉಪವಿಭಾಗಾಧಿಕಾರಿಗಳು ಹಾಗೂ ತಹಶೀಲ್ದಾರರು ಪ್ರತಿ ತಿಂಗಳು ದೇವಾಲಯಗಳಿಗೆ ಭೇಟಿ ನೀಡಿ ಅಲ್ಲಿನ ಕುಡಿಯುವ ನೀರು, ಸ್ವಚ್ಛತೆ ಹಾಗೂ ಶೌಚಾಲಯ ವ್ಯವಸ್ಥೆ ಪರಿಶೀಲಿಸಬೇಕು. ದೇವಾಲಯಗಳ ಅಭಿವೃದ್ಧಿಗೆ ಅಗತ್ಯ ಯೋಜನೆ ರೂಪಿಸಬೇಕು ಎಂದರು.

ತಾಲೂಕು ಮಟ್ಟದ ಕ್ರೀಡಾಂಗಣಗಳ ನಿರ್ಮಾಣಕ್ಕೆ ಅಗತ್ಯ ಸ್ಥಳ ಗುರುತಿಸುವಂತೆ ಸೂಚಿಸಿದ ಜಿಲ್ಲಾಧಿಕಾರಿಗಳು, ಕಂದಾಯ ಇಲಾಖೆಯ ಬಾಕಿ ಪ್ರಕರಣಗಳನ್ನು ಶೀಘ್ರ ಇತ್ಯರ್ಥಪಡಿಸಬೇಕು. ಎಲ್ಲ ಅಧಿಕಾರಿಗಳು ಪ್ರಾಮಾಣಿಕತೆ ಮತ್ತು ಪಾರದರ್ಶಕತೆಯಿಂದ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು. ಸಭೆಯಲ್ಲಿ ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರು, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಭಾಗವಹಿಸಿದ್ದರು.

ಎಸ್‌ಐಆರ್-2026 ಯಶಸ್ಸಿಗೆ ಸಾರ್ವಜನಿಕರ ಸಹಕಾರ ಕೋರಿದ ಅಧಿಕಾರಿಗಳು

# ಮತದಾರರ ಜಾಗೃತಿಗೆ ಮುಂಡರಗಿಯಲ್ಲಿ ಬೈಕ್ ರ್ಯಾಲಿ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್-2026) ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ತಾಲೂಕು ಸ್ವೀಪ್ ಸಮಿತಿ, ತಾಲೂಕು ಪಂಚಾಯಿತಿ, ತಾಲೂಕು ಆಡಳಿತ, ಶಿಕ್ಷಣ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಶುಕ್ರವಾರ ಪಟ್ಟಣದಲ್ಲಿ ಬೈಕ್ ರ್ಯಾಲಿ ಆಯೋಜಿಸಲಾಯಿತು.

ತಹಸೀಲ್ದಾರ್ ಕಚೇರಿಯಿಂದ ಆರಂಭವಾದ ರ್ಯಾಲಿಯು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಬಸ್ ನಿಲ್ದಾಣದಲ್ಲಿ ಸಮಾರೋಪಗೊಂಡಿತು. ಈ ವೇಳೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಮತದಾರರ ಜಾಗೃತಿ ಘೋಷಣೆಗಳನ್ನು ಕೂಗಿ ಸಾರ್ವಜನಿಕರಲ್ಲಿ ಅರಿವು ಮೂಡಿಸಿದರು.

ರ್ಯಾಲಿ ಬಳಿಕ ಮಾತನಾಡಿದ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ವಿಜಯಕುಮಾರ ಬೆಣ್ಣೆ, ಜೂನ್ 30ರಿಂದ ಜುಲೈ 29ರವರೆಗೆ ನಡೆಯುವ ವಿಶೇಷ ಸಮಗ್ರ ಪರಿಷ್ಕರಣೆ ವೇಳೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸುತ್ತಿದ್ದಾರೆ. ಸಾರ್ವಜನಿಕರು ಅಗತ್ಯ ದಾಖಲೆಗಳು ಹಾಗೂ ಮಾಹಿತಿಯನ್ನು ನೀಡಿ ಸಹಕರಿಸಬೇಕು ಎಂದು ಮನವಿ ಮಾಡಿದರು.

> "ನಿಖರ ಮತದಾರರ ಪಟ್ಟಿಯ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯ. ಬಿಎಲ್‌ಒಗಳಿಗೆ ಸರಿಯಾದ ಮಾಹಿತಿ ನೀಡಿ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯನ್ನು ಯಶಸ್ವಿಗೊಳಿಸಬೇಕು."
> **-ವಿಜಯಕುಮಾರ ಬೆಣ್ಣೆ, ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ, ಮುಂಡರಗಿ**

ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ಅಧ್ಯಕ್ಷ ನಾಗರಾಜ ಹಳ್ಳಿಕೇರಿ ಮಾತನಾಡಿ, ಮತದಾರರ ಪಟ್ಟಿಯಲ್ಲಿ ಎಲ್ಲ ಅರ್ಹರ ಹೆಸರು ಸೇರ್ಪಡೆಯಾಗುವಂತೆ ವಿವಿಧ ಮಾಧ್ಯಮಗಳ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಿರಸ್ತೆದಾರ ಚಿದಾನಂದ, ತಾಲೂಕು ನೌಕರರ ಸಂಘದ ಹಿರಿಯ ಉಪಾಧ್ಯಕ್ಷ ಜಗದೀಶ ಐರಣಿ, ಶಿಕ್ಷಕರ ಸಂಘದ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಹೊರಗುತ್ತಿಗೆ ನೌಕರರ ಸಂಘದ ಸದಸ್ಯರು ಭಾಗವಹಿಸಿದ್ದರು.

## ನೀವೂ ನಮ್ಮ ಜೊತೆ ಕೈಜೋಡಿಸಿ

**'ವಿಜಯಸಾಕ್ಷಿ'**

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545

## ಅರ್ಜಿ ಆಹ್ವಾನ

**ಗದಗ, 4 :** ಮುಂಡರಗಿ ಪುರಸಭೆ ವ್ಯಾಪ್ತಿಯ ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಅರ್ಹ ಅಭ್ಯರ್ಥಿಗಳಿಗೆ 202627ನೇ ಸಾಲಿನಲ್ಲಿ ಉಚಿತ ವಾಹನ ಚಾಲನಾ ತರಬೇತಿ ನೀಡಲಾಗುವುದು. ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ನಿಗದಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನ ಜುಲೈ 10 ಆಗಿದ್ದು ಅರ್ಜಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ಪುರಸಭೆ ಕಾರ್ಯಾಲಯ ಸಂಪರ್ಕಿಸಬಹುದಾಗಿದೆ.

ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳಿಗೆ ಕಾವ್ಯ ನಮನ

# ಅಂಧ (ರ) ಶ್ರೀಗಂಧ





ಹಾನಗಲ್ ಶ್ರೀ ಕುಮಾರಸ್ವಾಮಿಯ ಮುದ್ದಿನ ಕಂದ,
'ಪಂಚಾಕ್ಷರಿ' ಎಂಬ ನಾಮವೇ ಬಲು ಚಂದ;
ಉಣಿಸಿ ಬೆಳೆಸಿದರು ಸವಿಗಾನ ಮಕರಂದ,
ಕಂಪು ಸೂಸಿತು 'ಪುಟ್ಟರಾಜ' ಎಂಬ ಶ್ರೀಗಂಧ. ॥1॥
ಅಂಧರಿಗಾಗಿ ದುಡಿಯುತ್ತಲೇ ನಲಿದವರು,
ಪರಮಾತ್ಮನ ಒಲವನು ಪಡೆದವರು;
ಆತ್ಮಶಕ್ತಿಯ ಸಂದೇಶ ಜಗಕೆ ಸಾರಿದವರು,
'ನಡೆದಾಡುವ ದೇವರು' ಎಂಬ ಕೀರ್ತಿ ಪಡೆದವರು. ॥2॥
'ಗದಗ'ವನ್ನೇ ಪಾವನಗೊಳಿಸಿದ ಶ್ರೀಗಳ ಶ್ರಮ,
ಅನಾಥ ಮಕ್ಕಳಿಗೆ ಕಟ್ಟಿದ ಸ್ವರ್ಣಾಶ್ರಮ;
ತ್ರಿವಿಧ ದಾಸೋಹದಿಂದ ಅರಳಿದ ಆಶ್ರಮ,
ಭೂ ಕೈಲಾಸವಾಯಿತು 'ಪುಟ್ಟರಾಜರ ಪರಿಶ್ರಮ'. ॥3॥
ಶಿಷ್ಯವೃಂದ ಬೆಳೆಸಲು ಹಿಡಿದರು ಜೋಳಿಗೆ,
ಸ್ಪಂದಿಸಿದರು ಅಂಧ-ಕಿವುಡರ ಗೋಳಿಗೆ;
ಸಂಗೀತ-ಸಾಹಿತ್ಯ-ನಾಟಕದ ಸವಿಯ ಹೋಳಿಗೆ,
ಆಸರೆಯ ತಾಣವಾದರು ಅನಾಥ ಮಕ್ಕಳ ಬಾಳಿಗೆ. ॥4॥
ನೊಂದು ಒದ್ದೆಯಾಗಿವೆ ಕೋಟ್ಯಂತರ ಅಕ್ಷಿಗಳು,
ಮರೆಯಾಯಿತು ಅನಾಥರ ಬದುಕಿನ ರಕ್ಷೆಗಳು;
ಚೈತನ್ಯದ ಬೆಳಕಾಗಿದ್ದ ಶ್ರೀಗಳ ಸ್ಮೃತಿಗಳು,
'ವೀರೇಶ್ವರ ಪುಣ್ಯಾಶ್ರಮ'ವೇ ಸಾಕ್ಷಿ ಅವರ ಕೃತಿಗಳು. ॥5॥

-ಶ್ರೀಮತಿ ಗಿರಿಜಾ (ಎಂ.) ರಾಜು ಹೂಲಿ (ಗಿರಿಮಲ್ಲಿಕಾ)
ಆಡೂರು, ಹುಬ್ಬಳ್ಳಿ

ದಸಂಸ ಮನವಿಗೆ ಸರ್ಕಾರ ಸ್ಪಂದನೆ

# ವಾರದೊಳಗೆ ವಿಧಾನಸೌಧದಲ್ಲಿ ಸಭೆ; ದಲಿತರ ಬೇಡಿಕೆಗಳ ಪರಿಶೀಲನೆಗೆ ಡಾ. ಜಿ. ಪರಮೇಶ್ವರ ಭರವಸೆ




**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ದಲಿತರ ಅಭಿವೃದ್ಧಿಗೆ ಮೀಸಲಾದ ಎಸ್‌ಸಿಎಸ್‌ಪಿ/ಟಿಎಸ್‌ಪಿ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸುವುದು ಕಾಯ್ದೆ ಉಲ್ಲಂಘನೆ ಎಂದು ಆರೋಪಿಸಿ, ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ರಾಜ್ಯ ಸಮಿತಿ ಹಮ್ಮಿಕೊಂಡಿದ್ದ ದಲಿತ ಜನಾಗ್ರಹ ಸಮಾವೇಶದಲ್ಲಿ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಯಿತು. ಸಮಾವೇಶಕ್ಕೆ ಆಗಮಿಸಿದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ ಅವರು ಮನವಿ ಸ್ವೀಕರಿಸಿ, ವಾರದೊಳಗೆ ವಿಧಾನಸೌಧದಲ್ಲಿ ದಸಂಸ ಮುಖಂಡರ ಸಭೆ ಕರೆದು ಎಲ್ಲ ಬೇಡಿಕೆಗಳ ಕುರಿತು ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

> "ವಾರದೊಳಗೆ ವಿಧಾನ ಸೌಧದಲ್ಲಿ ದಲಿತ ಸಂಘರ್ಷ ಸಮಿತಿಯ ಮುಖಂಡರ ಸಭೆ ಕರೆದು, ನಿಮ್ಮ ಎಲ್ಲ ಬೇಡಿಕೆಗಳ ಕುರಿತು ಚರ್ಚಿಸಿ ಸರ್ಕಾರದಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು."
> **-ಡಾ. ಜಿ. ಪರಮೇಶ್ವರ, ಉಪಮುಖ್ಯಮಂತ್ರಿ**

ರಾಜ್ಯ ಸಮಿತಿಯ ನೇತೃತ್ವದಲ್ಲಿ ನಡೆದ ಸಮಾವೇಶದಲ್ಲಿ ಎಸ್‌ಸಿ/ಎಸ್‌ಟಿ ಸಮುದಾಯಗಳ ಆರ್ಥಿಕ ಹಾಗೂ ಸಾಮಾಜಿಕ ಸಬಲೀಕರಣಕ್ಕಾಗಿ ಜಾರಿಯಲ್ಲಿರುವ ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು ಎಂದು ಒತ್ತಾಯಿಸಲಾಯಿತು.

ಸರ್ಕಾರ ವಿಶೇಷ ಘಟಕ ಯೋಜನೆಯ ಅನುದಾನವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸುತ್ತಿರುವುದು ಕಾಯ್ದೆಯ ಆತ್ಮ-ಕ್ಕೆ ವಿರುದ್ಧವಾಗಿದೆ. ದಲಿತರ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಬೇರೆ ಉದ್ದೇಶಗಳಿಗೆ ಬಳಸದೆ, ಮೂಲ ಉದ್ದೇಶಕ್ಕೇ ಬಿಡುಗಡೆ ಮಾಡಬೇಕು ಎಂದು ಸಮಿತಿಯ ಮುಖಂಡರು ಆಗ್ರಹಿಸಿದರು.

ಇದೇ ವೇಳೆ ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯ ಸೆಕ್ಷನ್ 7(ಸಿ) ತಿದ್ದುಪಡಿ, ಪರಿಶಿಷ್ಟರ ಜನಸಂಖ್ಯೆಗೆ ಅನುಗುಣವಾಗಿ ಅನುದಾನ ಬಳಕೆ, ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಅಭಿವೃದ್ಧಿ ನಿಗಮಗಳಿಗೆ ಹೆಚ್ಚಿನ ಅನುದಾನ ಸೇರಿದಂತೆ ಒಟ್ಟು 19 ಪ್ರಮುಖ ಬೇಡಿಕೆಗಳ ಮನವಿ ಸರ್ಕಾರಕ್ಕೆ ಸಲ್ಲಿಸಲಾಯಿತು.

ಸಮಾವೇಶದ ಅಧ್ಯಕ್ಷತೆಯನ್ನು ರಾಜ್ಯ ಪ್ರಧಾನ ಸಂಚಾಲಕ ಮಾವಳ್ಳಿ ಶಂಕರ ವಹಿಸಿದ್ದರು. ಸಚಿವ ಡಾ. ಎಚ್.ಸಿ. ಮಹದೇವಪ್ಪ, ದಸಂಸ ಸಂಸ್ಥಾಪಕ ಪ್ರೊ. ಬಿ. ಕೃಷ್ಣಪ್ಪ ಅವರ ಧರ್ಮಪತ್ನಿ ಇಂದಿರಾ ಕೃಷ್ಣಪ್ಪ, ರಾಜ್ಯ ಸಂಘಟನಾ ಸಂಚಾಲಕರಾದ ರಮೇಶ್ ದಾಕುಳಕಿ, ರಾಮಣ್ಣ ಕಲ್ದೇವನಹಳ್ಳಿ, ಸುಂದರ್ ಮಾಸ್ಟರ್ ಹುಸೇನಪ್ಪ, ವಿಭಾಗೀಯ ಸಂಚಾಲಕ ಸಂಜಯ್ ಕಂಬಾಗಿ, ಗದಗ ಜಿಲ್ಲಾ ಸಂಚಾಲಕ ಬಾಲರಾಜ ಅರಬರ ಸೇರಿದಂತೆ ವಿವಿಧ ಜಿಲ್ಲೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

ಗದಗ ಜಿಲ್ಲೆಯಿಂದ ಹಿರಿಯ ಮುಖಂಡ ಪ್ರೊ. ಸತೀಶ್ ಪಾಸಿ, ಮುಂಡರಗಿ ತಾಲೂಕು ಸಂಚಾಲಕ ಎಚ್.ಡಿ. ಪೂಜಾರ, ಮಾರುತಿ ಅಂಗಡಿ, ರೋಣ ತಾಲೂಕು ಸಂಚಾಲಕ ಹನುಮಂತ ಚಲವಾದಿ, ಗಜೇಂದ್ರಗಡ ತಾಲೂಕು ಸಂಚಾಲಕ ಮಹೇಶ್ ಮಾದರ, ಸಹದೇವ ಡಂಬಳ, ಮರಿಯಪ್ಪ ಸಿದ್ದಣ್ಣವರ, ಮಂಜುನಾಥ ಚಲವಾದಿ ಸೇರಿದಂತೆ ನೂರಾರು ಕಾರ್ಯಕರ್ತರು ಸಮಾವೇಶದಲ್ಲಿ ಪಾಲ್ಗೊಂಡಿದ್ದರು.

ಭಾಗ್ಯಗಳ ಹೆಸರಲ್ಲಿ ಲೂಟಿ; ಭಿಕ್ಷೆ ಬೇಡ, ಮಹಿಳೆಯರಿಗೆ ಉದ್ಯೋಗ ನೀಡಿ": ನಿರ್ಮಲಾ ಡಿ. ಕೊಳ್ಳಿ ವಾಗ್ದಾಳಿ

# ಗೃಹಲಕ್ಷ್ಮಿಯಲ್ಲಿ ರೂ. 225 ಕೋಟಿ ಗೋಲ್‌ಮಾಲ್?

**ವಿಜಯಸಾಕ್ಷಿ ಸುದ್ದಿ, ಗದಗ**



ಗೃಹಲಕ್ಷ್ಮಿ ಯೋಜನೆಯ ಅನುಷ್ಠಾನದಲ್ಲಿ ಭಾರೀ ಅಕ್ರಮ ನಡೆದಿದ್ದು, ಯೋಜನೆಯಡಿ ರೂ.225 ಕೋಟಿಗೂ ಅಧಿಕ ಹಣ ದುರುಪಯೋಗವಾಗಿದೆ ಎಂದು ಸಿಎಜಿ ವರದಿಯನ್ನು ಉಲ್ಲೇಖಿಸಿ ಗದಗ ಜಿಲ್ಲಾ ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಡಿ. ಕೊಳ್ಳಿ ಆರೋಪಿಸಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಆರೋಪಿಸಿರುವ ಅವರು, ಚುನಾವಣೆಗೂ ಮುನ್ನ ಮಹಿಳೆಯರಿಗೆ ಪ್ರತಿ ತಿಂಗಳು ರೂ.2,000 ಹಾಗೂ 200 ಯೂನಿಟ್ ಉಚಿತ ವಿದ್ಯುತ್ ನೀಡುವ ಭರವಸೆ ನೀಡಿದ್ದ ಕಾಂಗ್ರೆಸ್ ಸರ್ಕಾರ, ಈಗ ಯೋಜನೆಗಳ ಅನುಷ್ಠಾನದಲ್ಲಿ ವೈಫಲ್ಯ ತೋರಿದೆ ಎಂದು ದೂರಿದ್ದಾರೆ.

ಸಿಎಜಿ ವರದಿಯ ಪ್ರಕಾರ ಮೃತಪಟ್ಟ ಸುಮಾರು 1.08 ಲಕ್ಷ ಫಲಾನುಭವಿಗಳ ಹೆಸರಿನಲ್ಲಿ ರೂ.116 ಕೋಟಿ, ಬ್ಯಾಂಕ್ ಖಾತೆ ವಿವರಗಳಿಲ್ಲದ 23,262 ಮಂದಿಗೆ ರೂ.46.65 ಕೋಟಿ, ಒಂದೇ ಬ್ಯಾಂಕ್ ಖಾತೆಗೆ 19,020 ಫಲಾನುಭವಿಗಳ ಹೆಸರಿನಲ್ಲಿ ರೂ.60.70 ಕೋಟಿ ಜಮೆ ಮಾಡಲಾಗಿದೆ ಎಂದು ಆರೋಪಿಸಿದರು.

ಇತ್ತೀಚೆಗೆ ಪರಿಶೀಲನೆ ಹೆಸರಿನಲ್ಲಿ ರಾಜ್ಯದಾದ್ಯಂತ 6 ಲಕ್ಷಕ್ಕೂ ಹೆಚ್ಚು ಅರ್ಹ ಮಹಿಳೆಯರನ್ನು ಗೃಹಲಕ್ಷ್ಮಿ ಯೋಜನೆಯಿಂದ ಕೈಬಿಡಲಾಗಿದೆ ಎಂದು ಆರೋಪಿಸಿದ ಅವರು, ಗೃಹಜ್ಯೋತಿ ಯೋಜನೆಯಲ್ಲೂ ಹೊಸ ಷರತ್ತುಗಳನ್ನು ವಿಧಿಸಿ ಫಲಾನುಭವಿಗಳಿಗೆ ತೊಂದರೆ ಉಂಟು ಮಾಡಲಾಗುತ್ತಿದೆ ಎಂದು ಟೀಕಿಸಿದರು.

ಯೋಜನೆಯಿಂದ ಕೈಬಿಟ್ಟಿರುವ ಅರ್ಹ ಫಲಾನುಭವಿಗಳನ್ನು ಕೂಡಲೇ ಮರುಸೇರ್ಪಡೆಗೊಳಿಸಿ, ಬಾಕಿ ಇರುವ ಹಣವನ್ನು ಜಮೆ ಮಾಡಬೇಕು. ಗೃಹಜ್ಯೋತಿ ಯೋಜನೆಯಲ್ಲಿನ ಜಟಿಲ ನಿಯಮಗಳನ್ನು ಸಡಿಲಗೊಳಿಸಬೇಕು ಎಂದು ಸರ್ಕಾರವನ್ನು ಆಗ್ರಹಿಸಿದರು. ಮಹಿಳೆಯರಿಗೆ ಉಚಿತ ಯೋಜನೆಗಳ ಬದಲಿಗೆ ಉದ್ಯೋಗ ಸೃಷ್ಟಿ, ಮಹಿಳಾ ಉದ್ಯಮಿಗಳಿಗೆ ಪ್ರೋತ್ಸಾಹ ಹಾಗೂ ಕಡಿಮೆ ಬಡ್ಡಿದರದಲ್ಲಿ ಸಾಲ ಸೌಲಭ್ಯ ಕಲ್ಪಿಸುವ ಮೂಲಕ ಸ್ವಾವಲಂಬಿ ಬದುಕಿಗೆ ಅವಕಾಶ ಮಾಡಿಕೊಡಬೇಕು ಎಂದು ನಿರ್ಮಲಾ ಡಿ. ಕೊಳ್ಳಿ ಒತ್ತಾಯಿಸಿದರು.

> "ಮಹಿಳೆಯರಿಗೆ ಉಚಿತ ಭಾಗ್ಯಗಳ ಭಿಕ್ಷೆ ಬೇಡ; ಗೌರವಯುತ ಬದುಕಿಗೆ ಉದ್ಯೋಗ ಮತ್ತು ಸ್ವ-ಯಂ ಉದ್ಯೋಗದ ಅವಕಾಶಗಳನ್ನು ಸರ್ಕಾರ ಕಲ್ಪಿಸಬೇಕು."
> **-ನಿರ್ಮಲಾ ಡಿ. ಕೊಳ್ಳಿ, ಜಿಲ್ಲಾಧ್ಯಕ್ಷೆ, ಬಿಜೆಪಿ ಮಹಿಳಾ ಮೋರ್ಚಾ, ಗದಗ**

ಅಲ್ಲದೆ, ಮಹಿಳೆಯರ ಹಕ್ಕುಗಳ ರಕ್ಷಣೆ ಹಾಗೂ ಯೋಜನೆಗಳಲ್ಲಿನ ಅಕ್ರಮವನ್ನು ಖಂಡಿಸಿ ಮುಂದಿನ ದಿನಗಳಲ್ಲಿ ಗದಗ ಜಿಲ್ಲಾಧಿಕಾರಿ ಕಚೇರಿ ಎದುರು ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಅವರು ಎಚ್ಚರಿಸಿದರು.



**ಮುಂಡರಗಿ:** ಅನ್ನದಾನೇಶ್ವರ ಸಂಸ್ಥಾನ ಮಠದಲ್ಲಿ ಮಾತೋಶ್ರೀ ಗುರಮ್ಮ ಶಿವಲಿಂಗಪ್ಪ ಹೊರಟ್ಟಿ ಅವರ ಸ್ಮರಣಾರ್ಥ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ದತ್ತಿ ನಿಧಿಯಡಿ ಆಯೋಜಿಸಿದ್ದ 'ಅವ್ವ' ಕುರಿತು ವಿಶೇಷ ಶಿವಾನುಭವ ಹಾಗೂ ಸಾಧಕರ ಸನ್ಮಾನ ಸಮಾರಂಭದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಡಾ. ಅನ್ನದಾನೇಶ್ವರ ಶ್ರೀಗಳು, ಡಾ. ಬಸವರಾಜ ಧಾರವಾಡ, ಆಡಳಿತಾಧಿಕಾರಿ ಡಾ. ಬಿ.ಜಿ. ಜವಳಿ, ಅಕ್ಕನ ಬಳಗದ ಸದಸ್ಯರು ಹಾಗೂ ಇತರರು ಉಪಸ್ಥಿತರಿದ್ದರು.

ಶಿವಾನಂದ ಪಿಯು ವಿಜ್ಞಾನ ಕಾಲೇಜಿನಲ್ಲಿ ಪಠ್ಯ-ಪಠ್ಯೇತರ ಚಟುವಟಿಕೆಗಳಿಗೆ ಚಾಲನೆ

# ಜ್ಞಾನಕ್ಕಿಂತ ಆರೋಗ್ಯವೇ ದೊಡ್ಡ ಸಂಪತ್ತು




**ವಿಜಯಸಾಕ್ಷಿ ಸುದ್ದಿ, ಗದಗ**

ಆರೋಗ್ಯವೇ ನಿಜವಾದ ಭಾಗ್ಯ. ದೈಹಿಕ ಆರೋಗ್ಯದ ಜೊತೆಗೆ ಮಾನಸಿಕ ಆರೋಗ್ಯವೂ ಅಷ್ಟೇ ಮುಖ್ಯವಾಗಿದ್ದು, ವಿದ್ಯಾರ್ಥಿಗಳು ಆರೋಗ್ಯಕರ ಜೀವನಶೈಲಿಯೊಂದಿಗೆ ಜ್ಞಾನಾರ್ಜನೆಯಲ್ಲಿ ತೊಡಗಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು ಎಂದು ಡಿ.ಜಿ.ಎಂ. ಆಯುರ್ವೇದ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎನ್. ಬೆಳವಡಿ ಹೇಳಿದರು.

ನಗರದ ಶ್ರೀ ಜಗದ್ಗುರು ಶಿವಾನಂದ ಪದವಿ ಪೂರ್ವ ವಿಜ್ಞಾನ ಕಾಲೇಜಿನಲ್ಲಿ ಆಯೋಜಿಸಿದ್ದ ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ತಮ್ಮ ಜೀವನಾನುಭವಗಳನ್ನು ಹಂಚಿಕೊಂಡು ವಿದ್ಯಾರ್ಥಿಗಳಿಗೆ ಆರೋಗ್ಯ ಮತ್ತು ಶಿಕ್ಷಣದ ಮಹತ್ವವನ್ನು ಮನದಟ್ಟುಗೊಳಿಸಿದರು.

ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಲಾಯಿತು. ಉಪನ್ಯಾಸಕ ಕೃಷ್ಣಪ್ರಸಾದ ಜಾಧವ ವಿದ್ಯಾರ್ಥಿಗಳಿಗೆ ಪ್ರಮಾಣ ವಚನ ಬೋಧಿಸಿದರು. ಎಂ.ಪಿ. ಮಂಟೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಹಿರಿಯ ಉಪನ್ಯಾಸಕ ಎಸ್.ಬಿ. ಹಿರೇಮಠ ಅತಿಥಿಗಳನ್ನು ಪರಿಚಯಿಸಿದರು.

ಕಾಲೇಜಿನ ಪ್ರಾಚಾರ್ಯ ಎಸ್.ವಿ. ವೆರ್ಣೇಕರ ಮಾತನಾಡಿ, ಜ್ಞಾನಾರ್ಜನೆಯ ಮಹತ್ವವನ್ನು ವಿವರಿಸುತ್ತಾ, ಕಾಲೇಜಿನ ಹಳೆಯ ವಿದ್ಯಾರ್ಥಿಗಳು ವಿವಿಧ ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿರುವುದನ್ನು ಉಲ್ಲೇಖಿಸಿದರು.

ಕಾರ್ಯಕ್ರಮದಲ್ಲಿ ವಿಜಯಲಕ್ಷ್ಮೀ ಪೂಜಾರ ಹಾಗೂ ತಂಡ ಪ್ರಾರ್ಥನೆ ನಡೆಸಿದರು. ಪವಿತ್ರಾ ಎಸ್.ಕೆ. ಸ್ವಾಗತಿಸಿದರು. ವಿಜಯಲಕ್ಷ್ಮೀ ಬದಿ ಅನಿಸಿಕೆ ಹಂಚಿಕೊಂಡರು. ಕೀರ್ತಿ ನವಲಗುಂದ ವಂದಿಸಿದರು. ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರಾಚೋಟೇಶ್ವರ ಶ್ರೀಗಳ ಪುಣ್ಯ ಕಾರ್ಯಕ್ರಮಕ್ಕೆ ಕುಮಾರಸ್ವಾಮಿ ಶುಭಾಶಯ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಅಂತೂರು-ಬೆಂತೂರಿನ ಶ್ರೀ ಜಗದ್ಗುರು ಬೂದೀಶ್ವರ ಸಂಸ್ಥಾನ ಮಠದ ಶ್ರೀ ಷ.ಬ್ರ. ಜಗದ್ಗುರು ಡಾ. ರಾಚೋಟೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ 60ನೇ ಮೌನ ಅನುಷ್ಠಾನ ಹಾಗೂ 16ನೇ ಶಿವಯೋಗ ಸಮಾಧಿ ಪುಣ್ಯ ಕಾರ್ಯಕ್ರಮಕ್ಕೆ ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕಾ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಶುಭ ಹಾರೈಸಿದ್ದಾರೆ.

ಕಾರ್ಯಕ್ರಮಕ್ಕೆ ಅವರನ್ನು ಆಹ್ವಾನಿಸಲಾಗಿತ್ತಾದರೂ, ಪೂರ್ವನಿಗದಿತ ಕೇಂದ್ರ ಸರ್ಕಾರದ ಕಾರ್ಯಕ್ರಮಗಳ ಹಿನ್ನೆಲೆಯಲ್ಲಿ ಭಾಗವಹಿಸಲು ಸಾಧ್ಯವಾಗಲಿಲ್ಲ. ಈ ಹಿನ್ನೆಲೆಯಲ್ಲಿ ಶುಭ ಸಂದೇಶ ಕಳುಹಿಸಿರುವ ಅವರು, ಶ್ರೀಗಳ ಅಪರೂಪದ ಪುಣ್ಯ ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಲಿ ಎಂದು ಹಾರೈಸಿದ್ದಾರೆ. ಕಾರ್ಯಕ್ರಮದಲ್ಲಿ ಭಾಗವಹಿಸಲು ಸಾಧ್ಯವಾಗದಿರುವುದಕ್ಕೆ ವಿಷಾದ ವ್ಯಕ್ತಪಡಿಸಿದ ಕುಮಾರಸ್ವಾಮಿ, ಶ್ರೀಗಳ ಆಶೀರ್ವಾದ ಸದಾ ರಾಜ್ಯ ಹಾಗೂ ಸಮಾಜದ ಮೇಲೆ ಇರಲಿ ಎಂದು ತಮ್ಮ ಶುಭಾಶಯ ಸಂದೇಶದಲ್ಲಿ ತಿಳಿಸಿದ್ದಾರೆ.

### ಒಪಿಎಸ್ ಮರುಜಾರಿಗೆ ಒತ್ತಾಯ; ಅನುದಾನಿತ ಶಾಲೆಗಳ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರಕ್ಕೆ ಮನವಿ

# ಹಳೆ ಪಿಂಚಣಿ ಯೋಜನೆ ಜಾರಿಗೆ ಆಗ್ರಹಿಸಿ ಶಿಕ್ಷಕರ ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎಲ್ಲ ಸರ್ಕಾರಿ ಹಾಗೂ ಅನುದಾನಿತ ಶಾಲಾ ನೌಕರರಿಗೆ ಅನುಕೂಲವಾಗುವಂತೆ ಹಳೆ ಪಿಂಚಣಿ ಯೋಜನೆ (ಒಪಿಎಸ್) ಮರುಜಾರಿಗೊಳಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಸದಸ್ಯರು ಶನಿವಾರ ಪ್ರತಿಭಟನಾ ಮೆರವಣಿಗೆ ನಡೆಸಿ ತಹಸೀಲ್ದಾರ್ ಎಂ. ಧನಂಜಯ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಂಗಣದಲ್ಲಿ ನಡೆದ ಸಮಾವೇಶದ ಬಳಿಕ ಸಂಘದ ಅಧ್ಯಕ್ಷ ಎಸ್.ಸಿ. ಗೋಲಪ್ಪನವರ, ಆರ್.ಎಚ್. ನರೇಗಲ್ಲ ಹಾಗೂ ಎಲ್.ಎಸ್. ಅರಳಹಳ್ಳಿ ನೇತೃತ್ವದಲ್ಲಿ ಪಾದಯಾತ್ರೆ ಮೂಲಕ ತಹಸೀಲ್ದಾರ್ ಅವರ ಕಚೇರಿಗೆ ತೆರಳಿ ಮನವಿ ಸಲ್ಲಿಸಲಾಯಿತು.

> "2006ರ ನಂತರ ನೇಮಕಗೊಂಡ ಅನುದಾನಿತ ಶಾಲಾ ನೌಕರರ ಬಹುದಿನಗಳ ಬೇಡಿಕೆಯಾಗಿರುವ ಹಳೆ ಪಿಂಚಣಿ ಯೋಜನೆಯನ್ನು ಸರ್ಕಾರ ಕೂಡಲೇ ಮರುಜಾರಿಗೊಳಿಸಬೇಕು."
>
> **–ಎಲ್.ಎಸ್. ಅರಳಹಳ್ಳಿ, ಅಧ್ಯಕ್ಷರು, ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘ**

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ, 2006ರ ನಂತರ ನೇಮಕಗೊಂಡ ಅನುದಾನಿತ ಶಾಲಾ ನೌಕರರ ಬಹುದಿನಗಳ ಬೇಡಿಕೆಯಾಗಿರುವ ಹಳೆ ಪಿಂಚಣಿ ಯೋಜನೆಯನ್ನು ಸರ್ಕಾರ ಇನ್ನೂ ಜಾರಿಗೆ ತಂದಿಲ್ಲ. ಹಲವು ಬಾರಿ ಹೋರಾಟ ನಡೆಸಿದರೂ ಸರ್ಕಾರ ಸ್ಪಂದಿಸಿಲ್ಲ. ಹೀಗಾಗಿ ಕೂಡಲೇ ಓಪಿಎಸ್ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.




ಇದೇ ವೇಳೆ ಅನುದಾನಿತ ಶಾಲೆಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದು, ಕಾಲ್ಪನಿಕ ವೇತನ ಜಾರಿಗೊಳಿಸುವುದು, ಕೆಪಿಎಸ್ ಹಾಗೂ ಪಿಎಂಶ್ರೀ ಶಾಲೆಗಳನ್ನು ಅನುದಾನಿತ ಶಾಲೆಗಳಿಂದ ಮೂರು ಕಿಲೋಮೀಟರ್ ವ್ಯಾಪ್ತಿಯ ಹೊರಗೆ ಆರಂಭಿಸುವುದು, ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ದೊರೆಯುವ ಸೌಲಭ್ಯಗಳನ್ನು ಅನುದಾನಿತ ಶಾಲಾ ವಿದ್ಯಾರ್ಥಿಗಳಿಗೂ ವಿಸ್ತರಿಸುವುದು, ಶಿಕ್ಷಕರಿಗೆ ಬೋಧನಾ ಕಾರ್ಯ ಹೊರತುಪಡಿಸಿ ಇತರೆ ಕೆಲಸಗಳನ್ನು ನೀಡದಿರುವುದು ಸೇರಿದಂತೆ ವಿವಿಧ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಎ.ಜಿ. ಲಿಂಗಶೆಟ್ಟರ, ಬಿ.ಬಿ. ಬಳಿಗಾರ, ವಿ.ಸಿ. ಬೆಂಡಿಗೇರಿ, ಎಂ.ಬಿ. ಕಲ್ಲೂರ, ಟಿ.ಎಸ್. ಹೂಗಾರ, ಆರ್.ಆರ್. ಅಯ್ಯನಗೌಡ್ರ, ಪಿ.ಟಿ. ಪವಾರ, ಎಸ್.ಬಿ. ಬೆಟಗೇರಿ, ಎ.ಬಿ. ಹೂಗಾರ, ಎಂ.ಎಚ್. ಬೆಳಗಟ್ಟಿ, ವಿ.ಎಸ್. ಹಿರೇಮಠ, ಎಂ.ಎಸ್. ಚೌಧರಿ, ಆರ್.ಎಚ್. ನರೇಗಲ್ಲ, ಜಿ.ಎನ್. ಮೆಳ್ಳಳ್ಳಿ, ಎಂ.ಸಿ. ಹಿರೇಮಠ, ಆರ್.ಸಿ. ಉಮಚಗಿ, ಎಸ್.ಎಸ್. ಮಠದ, ಎಸ್.ಎಂ. ಹಾದಿಮನಿ, ಎ.ಎಂ. ಛತ್ರದ, ಎಲ್.ಎಂ. ಹುರಳಿಕೊಪ್ಪಿ, ಪಿ.ಎಲ್. ಪಾಟೀಲ, ಶೀಲಾ ತಳವಾರ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಇಂದಿರಾ ಕ್ಯಾಂಟೀನ್' ಭರವಸೆ ಗಾಳಿಗೆ: ಕಾಂಗ್ರೆಸ್ ವಿರುದ್ಧ ಬಿಜೆಪಿ ವಾಗ್ದಾಳಿ

**ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದ ಬಡವರಿಗೆ ಪೌಷ್ಟಿಕ ಆಹಾರ ಒದಗಿಸುವ ಉದ್ದೇಶದಿಂದ ಕಾಂಗ್ರೆಸ್ ಸರ್ಕಾರ ಘೋಷಿಸಿದ್ದ 'ಇಂದಿರಾ ಕ್ಯಾಂಟೀನ್' ಯೋಜನೆ ಇನ್ನೂ ಅನುಷ್ಠಾನಕ್ಕೆ ಬಂದಿಲ್ಲ. ಯೋಜನೆ ಘೋಷಣೆಯಾಗಿ ಹಲವು ತಿಂಗಳು ಕಳೆದರೂ ಒಂದೇ ಒಂದು ಟೆಂಡರ್ ಕರೆಯದಿರುವುದು ಸರ್ಕಾರದ ವೈಫಲ್ಯಕ್ಕೆ ಸಾಕ್ಷಿಯಾಗಿದೆ ಎಂದು ಬಿಜೆಪಿ ಮುಖಂಡ ಹಾಗೂ ಉದ್ಯಮಿ ವಿಜಯಕುಮಾರ ಗಡ್ಡಿ ಆರೋಪಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸರ್ಕಾರ ದೊಡ್ಡ ದೊಡ್ಡ ಯೋಜನೆಗಳನ್ನು ಘೋಷಿಸುವುದರಲ್ಲಿ ಆಸಕ್ತಿ ತೋರುತ್ತದೆ ಹೊರತು ಅವುಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವಲ್ಲಿ ವಿಫಲವಾಗಿದೆ ಎಂದು ಟೀಕಿಸಿದ್ದಾರೆ.

ಇಂದಿರಾ ಕ್ಯಾಂಟೀನ್ ಯೋಜನೆ ಘೋಷಣೆಯಾಗಿಯೇ ಉಳಿದಿದ್ದು, ಸರ್ಕಾರ ತನ್ನ ಇಚ್ಛೆಯ ಕಂಪನಿಗಳಿಗೆ ಟೆಂಡರ್ ನೀಡುವ ಉದ್ದೇಶದಿಂದ ಯೋಜನೆ ವಿಳಂಬವಾಗುತ್ತಿದೆ ಎಂಬ ಅನುಮಾನ ಮೂಡುತ್ತಿದೆ ಎಂದು ಅವರು ಹೇಳಿದರು.

ಗ್ಯಾರಂಟಿ ಯೋಜನೆಗಳ ಭರವಸೆ ನೀಡಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ, ಈಗ ಅವುಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲು ಸಾಧ್ಯವಾಗುತ್ತಿಲ್ಲ. ಜನಸಾಮಾನ್ಯರಿಗೆ ತಲುಪಬೇಕಾದ ಯೋಜನೆಗಳು ಕಾಂಗ್ರೆಸ್ ಮುಖಂಡರ ರಾಜಕೀಯ ಪ್ರಚಾರಕ್ಕೆ ಸೀಮಿತವಾಗಿವೆ ಎಂದು ಆರೋಪಿಸಿದರು.

ಗೃಹಲಕ್ಷ್ಮಿ ಹಾಗೂ ಗೃಹಜ್ಯೋತಿ ಯೋಜನೆಗಳು ರಾಜ್ಯದ ಬೊಕ್ಕಸಕ್ಕೆ ಹೊರೆಯಾಗಿರುವ ಕಾರಣ ಫಲಾನುಭವಿಗಳ ಸಂಖ್ಯೆಯನ್ನು ಕಡಿಮೆ ಮಾಡಲು ಸರ್ಕಾರ ವಿವಿಧ ಕ್ರಮಗಳನ್ನು ಅನುಸರಿಸುತ್ತಿದೆ. ಇದರ ಪರಿಣಾಮ ಜನರಲ್ಲಿ ಅಸಮಾಧಾನ ಹೆಚ್ಚಾಗಿದೆ ಎಂದು ಅವರು ದೂರಿದರು.

> "ದೊಡ್ಡ ದೊಡ್ಡ ಯೋಜನೆಗಳನ್ನು ಘೋಷಿಸುವ ಕಾಂಗ್ರೆಸ್ ಸರ್ಕಾರ, ಅವುಗಳನ್ನು ಜಾರಿಗೆ ತರುವಲ್ಲಿ ಸಂಪೂರ್ಣ ವಿಫಲವಾಗಿದೆ. 'ಇಂದಿರಾ ಕ್ಯಾಂಟೀನ್' ಯೋಜನೆಯೇ ಇದಕ್ಕೆ ಸ್ಪಷ್ಟ ಉದಾಹರಣೆ."
>
> **–ವಿಜಯಕುಮಾರ ಗಡ್ಡಿ, ಬಿಜೆಪಿ ಮುಖಂಡ**

ರಾಜ್ಯದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮತ್ತು ಸಿದ್ದರಾಮಯ್ಯ ಬಣಗಳ ನಡುವಿನ ಭಿನ್ನಾಭಿಪ್ರಾಯಗಳಿಂದ ಸಚಿವ ಸಂಪುಟ ವಿಸ್ತರಣೆಯೂ ವಿಳಂಬವಾಗಿದ್ದು, ಒಟ್ಟಾರೆ ಆಡಳಿತ ವ್ಯವಸ್ಥೆಯ ಮೇಲೆ ಪರಿಣಾಮ ಬೀರಿದೆ ಎಂದು ವಿಜಯಕುಮಾರ ಗಡ್ಡಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶೇಷ ದಾಖಲಾತಿ ಆಂದೋಲನ ಯಶಸ್ವಿಗೆ ಸಮುದಾಯದ ಸಹಕಾರ ಅಗತ್ಯ: ಕವಿತಾ ದಂಡಿನ

# ಸರ್ಕಾರಿ ಶಾಲೆಗಳತ್ತ ಹೆಜ್ಜೆ ಇಡಿ



**ವಿಜಯಸಾಕ್ಷಿ ಸುದ್ದಿ, ಗದಗ**

ಶಾಲೆಯಿಂದ ಹೊರಗುಳಿದ ಹಾಗೂ ಇದುವರೆಗೆ ದಾಖಲಾತಿಯಾಗದ ಪ್ರತಿಯೊಂದು ಮಗುವನ್ನೂ ಶಿಕ್ಷಣದ ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಹಮ್ಮಿಕೊಂಡಿರುವ ವಿಶೇಷ ದಾಖಲಾತಿ ಆಂದೋಲನಕ್ಕೆ ಸಮುದಾಯ ಕೈಜೋಡಿಸಬೇಕು ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಕರೆ ನೀಡಿದರು.

ನಗರದ ಎಪಿಎಂಸಿ ವೀರನಾರಾಯಣ ಬಡಾವಣೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.13ರಲ್ಲಿ ಶನಿವಾರ ನಡೆದ ವಿಶೇಷ ದಾಖಲಾತಿ ಆಂದೋಲನದಲ್ಲಿ ಅವರು ಮಾತನಾಡಿ, ಸರ್ಕಾರಿ ಶಾಲೆಗಳು ಮಕ್ಕಳಲ್ಲಿ ಆತ್ಮವಿಶ್ವಾಸ ಹಾಗೂ ಆತ್ಮಸ್ಥೈರ್ಯ ಬೆಳೆಸುವ ಕೇಂದ್ರಗಳಾಗಿವೆ. ಗುಣಮಟ್ಟದ ಶಿಕ್ಷಣದ ಜೊತೆಗೆ ಸರ್ಕಾರದ ವಿವಿಧ ಸೌಲಭ್ಯಗಳು ಉಚಿತವಾಗಿ ದೊರೆಯುತ್ತಿದ್ದು, ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ದಾಖಲಿಸಬೇಕು ಎಂದು ಮನವಿ ಮಾಡಿದರು.

ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ ರಾಘವೇಂದ್ರ ಕಲಗುಡಿ ಮಾತನಾಡಿ, ಸರ್ಕಾರಿ ಶಾಲೆಗಳು ಮಕ್ಕಳಿಗೆ ಆತ್ಮೀಯ ಕಲಿಕಾ ವಾತಾವರಣ ಕಲ್ಪಿಸುತ್ತವೆ. ಉಚಿತ ಸೌಲಭ್ಯಗಳ ಸದುಪಯೋಗ ಪಡೆದು ಮಕ್ಕಳ ಭವಿಷ್ಯ ರೂಪಿಸುವ ಜವಾಬ್ದಾರಿ ಪಾಲಕರ ಮೇಲಿದೆ ಎಂದರು.

ಮುಖ್ಯೋಪಾಧ್ಯಾಯಿನಿ ಸುಧಾ ಬೇವಿನಮಟ್ಟಿ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಶಿಕ್ಷಣದ ಜೊತೆಗೆ ಜೀವನ ಮೌಲ್ಯಗಳನ್ನೂ ಕಲಿಸಲಾಗುತ್ತದೆ. ಪ್ರತಿಯೊಂದು ಮಗುವಿನ ಸರ್ವಾಂಗೀಣ ಬೆಳವಣಿಗೆಗೆ ವಿಶೇಷ ಕಾಳಜಿ ವಹಿಸಲಾಗುತ್ತದೆ ಎಂದು ತಿಳಿಸಿದರು.

> "ಶಾಲೆಯಿಂದ ಹೊರಗುಳಿದ ಪ್ರತಿಯೊಂದು ಮಗುವನ್ನೂ ಶಿಕ್ಷಣದ ಮುಖ್ಯವಾಹಿನಿಗೆ ತರುವುದು ನಮ್ಮೆಲ್ಲರ ಜವಾಬ್ದಾರಿ. ಸರ್ಕಾರಿ ಶಾಲೆಗಳು ಗುಣಮಟ್ಟದ ಶಿಕ್ಷಣದೊಂದಿಗೆ ಉಜ್ವಲ ಭವಿಷ್ಯ ಕಟ್ಟಿಕೊಡುತ್ತವೆ."
>
> **–ಕವಿತಾ ದಂಡಿನ, ಸಂಪನ್ಮೂಲ ವ್ಯಕ್ತಿ**

ವಿಶೇಷ ದಾಖಲಾತಿ ಆಂದೋಲನದ ಅಂಗವಾಗಿ ಮೂರು ಮಕ್ಕಳಿಗೆ ದಾಖಲಾತಿ ಮಾಡಲಾಗಿದ್ದು, ಅವರಲ್ಲಿ ಒಬ್ಬ ವಿಶೇಷಚೇತನ ಮಗುವೂ ಸೇರಿದೆ.

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಅಧ್ಯಕ್ಷೆ ರತ್ನಾ ಪೂಜಾರ, ಉಪಾಧ್ಯಕ್ಷ ಪುಂಡಲಿಕ್ ಹೊನ್ನಳ್ಳಿ, ಸದಸ್ಯರಾದ ಗೌಸುಸಾಬ ಮುಲ್ಲಾ, ಪ್ರೇಮಾ ಜಾಲವಾಡಗಿ, ಶರಣಬಸಪ್ಪ ಅಂಗಡಿ, ಶಕುಂತಲಾ ಲಮಾಣಿ, ವಾಸಕ್ಕ ಬಿದರಣ್ಣವರ, ಗೀತಾ ನಡುವಲಮನಿ, ದ್ಯಾಮವ್ವ ಪೂಜಾರ, ಹೇಮಾ ಸಂಗಟಿ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ಅತಿಥಿ ಶಿಕ್ಷಕರು ಉಪಸ್ಥಿತರಿದ್ದರು.

### ವೀರೇಶ್ವರ ಪುಣ್ಯಾಶ್ರಮದಲ್ಲಿ ಪಂಚಾಕ್ಷರಿ ಗವಾಯಿ–ಪುಟ್ಟರಾಜ ಗವಾಯಿ ಪುಣ್ಯಸ್ಮರಣೆ

# ಅಂಧ–ಅನಾಥರ ಬದುಕಿಗೆ ಬೆಳಕಾದ ಉಭಯ ಗುರುಗಳು




**ವಿಜಯಸಾಕ್ಷಿ ಸುದ್ದಿ, ಗದಗ**

ಕನ್ನಡನಾಡಿಗೆ ಪಂಡಿತ ಪಂಚಾಕ್ಷರಿ ಗವಾಯಿಗಳು ಹಾಗೂ ಪಂಡಿತ ಡಾ. ಪುಟ್ಟರಾಜ ಕವಿ ಗವಾಯಿಗಳಂತಹ ಮಹಾನ್ ಗುರುಗಳು ದೊರೆತಿರುವುದು ನಮ್ಮೆಲ್ಲರ ಪುಣ್ಯ. ಉಭಯ ಗುರುಗಳು ಅಂಧ□ಅನಾಥರ ಸೇವೆಗೆ ತಮ್ಮ ಜೀವನವನ್ನೇ ಮುಡಿಪಾಗಿಟ್ಟು ಸಂಗೀತದ ಮೂಲಕ ಸಾವಿರಾರು ಮಂದಿಯ ಬದುಕಿಗೆ ಬೆಳಕು ನೀಡಿದರು ಎಂದು ಮುಂಡರಗಿಯ ಜಗದ್ಗುರು ಡಾ. ಅನ್ನದಾನೀಶ್ವರ ಶಿವಯೋಗಿಗಳು ಹೇಳಿದರು.

ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಲಿಂ. ಪಂ. ಪಂಚಾಕ್ಷರಿ ಗವಾಯಿಗಳವರ 82ನೇ ಹಾಗೂ ಲಿಂ. ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 16ನೇ ಪುಣ್ಯಸ್ಮರಣೋತ್ಸವ ಮತ್ತು ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಶುಕ್ರವಾರ ನಡೆದ ಕೀರ್ತನ ಸಮ್ಮೇಳನದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಹಾನಗಲ್ ಕುಮಾರೇಶ್ವರ ಶಿವಯೋಗಿಗಳು ಗದಿಗೆಯ್ಯನವರಿಗೆ ಸಂಗೀತ ಶಿಕ್ಷಣ ನೀಡದಿದ್ದರೆ ಪಂಚಾಕ್ಷರಿ ಗವಾಯಿಗಳು ರೂಪುಗೊಳ್ಳುತ್ತಿರಲಿಲ್ಲ. ಅದೇ ರೀತಿ ಪುಟ್ಟರಾಜ ಕವಿ ಗವಾಯಿಗಳು ಅಂಧ□ಅನಾಥರಿಗೆ ಸಂಗೀತ ಶಿಕ್ಷಣ ನೀಡದಿದ್ದರೆ ಗದುಗಿನ ವೀರೇಶ್ವರ ಪುಣ್ಯಾಶ್ರಮವು ಸಂಗೀತ ಕಾಶಿಯಾಗಿ ಬೆಳೆದಿರುತ್ತಿರಲಿಲ್ಲ. ಅವರ ಆದರ್ಶ, ಕೃಪಾಶೀರ್ವಾದದಿಂದ ಆಶ್ರಮದ ಕೀರ್ತಿಯನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯುವುದು ನಮ್ಮೆಲ್ಲರ ಕರ್ತವ್ಯ ಎಂದರು.

ಕಪೋತಗಿರಿ ನಂದಿವೇರಿ ಸಂಸ್ಥಾನ ಮಠದ ಪೂಜ್ಯ ಶಿವಕುಮಾರ ಮಹಾಸ್ವಾಮಿಗಳು ಮಾತನಾಡಿ, ಉಭಯ ಗುರುಗಳು ವೀರೇಶ್ವರ ಪುಣ್ಯಾಶ್ರಮವನ್ನು ಸಂಗೀತದ ಕಾಶಿಯನ್ನಾಗಿ ರೂಪಿಸಿದ್ದಾರೆ. ಆಶ್ರಮದಲ್ಲಿ ಸಂಗೀತ, ಸಾಹಿತ್ಯ, ಕಲೆ ಹಾಗೂ ಧಾರ್ಮಿಕ ಚಟುವಟಿಕೆಗಳು ನಿರಂತರವಾಗಿ ನಡೆಯಲಿ ಎಂದು ಹಾರೈಸಿದರು.

> "ಪಂಚಾಕ್ಷರಿ ಗವಾಯಿಗಳು ಮತ್ತು ಪುಟ್ಟರಾಜ ಗವಾಯಿಗಳು ಅಂಧ–ಅನಾಥರ ಬದುಕನ್ನು ಸಂಗೀತದ ಮೂಲಕ ಬೆಳಗಿಸಿದ ಮಹಾನ್ ಸಂತರು. ಅವರ ಸೇವೆಯನ್ನು ಮುಂದುವರಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ."
>
> **–ಜಗದ್ಗುರು ಡಾ. ಅನ್ನದಾನೀಶ್ವರ ಶಿವಯೋಗಿಗಳು, ಮುಂಡರಗಿ**

ಓಂಕಾರಗಿರಿಯ ಓಂಕಾರೇಶ್ವರ ಹಿರೇಮಠದ ಫಕ್ಕೀರೇಶ್ವರ ಪಟ್ಟಾಧ್ಯಕ್ಷರು ಮಾತನಾಡಿ, ಧರ್ಮದ ಉಳಿವಿಗೆ ಹಿಂದಿನ ಮಹಾತ್ಮರು ಅಪಾರ ಶ್ರಮಿಸಿದ್ದಾರೆ. ಆಶ್ರಮವನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಧರ್ಮವಾಗಿದೆ. ಕಲಾವಿದರು ತಮ್ಮ ಸಾಧನೆಯ ಮೂಲಕ ಆಶ್ರಮದ ಕೀರ್ತಿಯನ್ನು ಹೆಚ್ಚಿಸಬೇಕು ಎಂದರು. ಗದುಗಿನ ಆಧ್ಯಾತ್ಮ ವಿದ್ಯಾಶ್ರಮದ ಡಾ. ಶಿವಶರಣೆ ನೀಲಮ್ಮ ತಾಯಿ ಮಾತನಾಡಿ, ಒಂದು ಕಾಲದಲ್ಲಿ ಸಂಗೀತವು ಶ್ರೀಮಂತರ ಸ್ವತ್ತಾಗಿತ್ತು. ಉಭಯ ಗುರುಗಳು ಅಂಧ□ಅನಾಥರಿಗೆ ಸಂಗೀತ ಶಿಕ್ಷಣ ನೀಡಿ ಅವರ ಬದುಕಿಗೆ ಹೊಸ ದಿಕ್ಕು ತೋರಿಸಿದರು. ಸಂಗೀತದ ಮೂಲಕ ಸಮಾಜ ಸೇವೆ ಮಾಡಿದ ಅವರ ಕೊಡುಗೆ ಅಮೂಲ್ಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಅಡ್ನೂರ ಬ್ರಹನ್ಮಠದ ಅಭಿನವ ಪಂಚಾಕ್ಷರ ಶಿವಾಚಾರ್ಯ ಮಹಾಸ್ವಾಮಿಗಳು, ಸಂಗಮೇಶ ಗವಾಯಿಗಳು ಸಮ್ಮುಖ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶೇಖಣ್ಣ ಗದ್ದಿಕೇರಿ, ವಿ. ಜಂಬನಗೌಡ್ರು, ವೈ. ಮೃತ್ಯುಂಜಯ, ಎಸ್.ಪಿ. ಪಂಪನಗೌಡ, ಎಸ್. ಗುರುಪಂಚಾಕ್ಷರಿ, ಬೆಂಗಳೂರಿನ ಹೇಮಾ ಮಾತಾಜಿ□ಮನೋಹರ ಗುರೂಜಿ, ಎಚ್. ನಾಗನಗೌಡರು ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಪೂಜ್ಯ ಕಲ್ಲಯ್ಯಜ್ಜನವರು ಆಶೀರ್ವಚನ ಹಾಗೂ ಮಂಗಳಾಶಯ ಸಲ್ಲಿಸಿದರು. ದಾವಣಗೆರೆ ಮತ್ತು ಶಿವಮೊಗ್ಗ ಶಾಖಾ ಆಶ್ರಮಗಳ ಅಂಧ ವಿದ್ಯಾರ್ಥಿಗಳು ಪ್ರಾರ್ಥನೆ ಹಾಗೂ ಭಕ್ತಿಗೀತೆಗಳನ್ನು ಪ್ರಸ್ತುತಪಡಿಸಿದರು. ಹರ್ಲಾಪೂರದ ಸದಾನಂದ ಶಾಸ್ತ್ರಿಗಳು ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದ ಬಳಿಕ ನಾಡಿನ ವಿವಿಧ ಸಂಗೀತಗಾರರಿಂದ ಅಹೋರಾತ್ರಿ ಸಂಗೀತ ಸಮಾರಾಧನೆ ನಡೆಯಿತು.

## ಮೊದಲನೆಯ ಪುಟದ್ದು

### ಧಾರ್ಮಿಕ ಸಾಮರಸ್ಯಕ್ಕೆ ಪೀರಸಾಬ್.....

ಶ್ರೀ ವೀರೇಶ್ವರ ಪುಣ್ಯಾಶ್ರಮದ ಪರಮಪೂಜ್ಯ ಡಾ. ಕಲ್ಲಯ್ಯಜ್ಜನವರ ಮೂಲಕ ಹಾಗೂ ಶ್ರೀ ದುರ್ಗಾದೇವಿ ದೇವಸ್ಥಾನದ ಟ್ರಸ್ಟ್ ಮೂಲಕ ಸಲ್ಲಿಸಿರುವ ಮನವಿಯಲ್ಲಿ, ಎರಡೂ ಧಾರ್ಮಿಕ ಸಂಸ್ಥೆಗಳು ಲಕ್ಷಾಂತರ ಭಕ್ತರ ಆರಾಧನಾ ಕೇಂದ್ರಗಳಾಗಿವೆ ಎಂದು ಅವರು ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

ಯಾವುದೇ ವ್ಯಕ್ತಿ ಅಥವಾ ಸಂಘಟನೆಯನ್ನು ಗುರಿಯಾಗಿಸದೆ, ಧಾರ್ಮಿಕ ಸಂಸ್ಥೆಗಳ ಪಾವಿತ್ರ್ಯ, ಸರ್ವಧರ್ಮ ಸಮಭಾವ ಹಾಗೂ ಸಾಮಾಜಿಕ ಸೌಹಾರ್ದ ಕಾಪಾಡುವ ಉದ್ದೇಶದಿಂದ ವಿವಾದಕ್ಕೆ ಕಾರಣವಾಗಿರುವ ಹೆಸರುಗಳನ್ನು ಕಾನೂನುಬದ್ಧವಾಗಿ ಪರಿಶೀಲಿಸಿ ತೆರವುಗೊಳಿಸುವಂತೆ ಮನವಿಯಲ್ಲಿ ಆಗ್ರಹಿಸಲಾಗಿದೆ.

ಈ ಕುರಿತು ಶ್ರೀ ವೀರೇಶ್ವರ ಪುಣ್ಯಾಶ್ರಮ ಮಠದ ಪೀಠಾಧಿಪತಿಗಳು, ಟ್ರಸ್ಟ್‌ನ ಆಡಳಿತ ಮಂಡಳಿ, ದುರ್ಗಾದೇವಿ ದೇವಸ್ಥಾನದ ಆಡಳಿತ ಮಂಡಳಿ ಹಾಗೂ ಸಂಬಂಧಿತ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಪೀರಸಾಬ್ ಕೌತಾಳ ಮನವಿ ಮಾಡಿದ್ದಾರೆ.

ಧಾರ್ಮಿಕ ವಿಷಯದಲ್ಲಿ ವಿವಾದಕ್ಕಿಂತ ಸಾಮರಸ್ಯಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ಪೀರಸಾಬ್ ಕೌತಾಳ ಕೈಗೊಂಡಿರುವ ಈ ಕ್ರಮ ಸಾರ್ವಜನಿಕರ ಗಮನ ಸೆಳೆದಿದ್ದು, ಎರಡೂ ಧಾರ್ಮಿಕ ಸಂಸ್ಥೆಗಳ ಘನತೆ ಕಾಪಾಡುವ ಪ್ರಯತ್ನವಾಗಿ ಹಲವು ವಲಯಗಳಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಈ ಸಂದರ್ಭದಲ್ಲಿ ಆನಂದ ಸಾಲಿಗ್ರಾಮ, ರಮೇಶ್ ಚಲವಾದಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ವಿದ್ಯಾರ್ಥಿಗಳ ಜಾಗೃತಿ ಜಾಥಾ.....

ಮತದಾರರು ಅವುಗಳನ್ನು ಸರಿಯಾಗಿ ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬೇಕು ಎಂದು ತಿಳಿಸಿದರು.

ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ, ತಿದ್ದುಪಡಿ ಹಾಗೂ ಹೆಸರು ತೆಗೆದುಹಾಕುವ ಪ್ರಕ್ರಿಯೆಯಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಬೇಕು. ನಿಖರ ಮತದಾರರ ಪಟ್ಟಿಯ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ. 18 ವರ್ಷ ಪೂರ್ಣಗೊಂಡ ಪ್ರತಿಯೊಬ್ಬ ಯುವಕ-ಯುವತಿಯೂ ಕಡ್ಡಾಯವಾಗಿ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ವಿದ್ಯಾರ್ಥಿಗಳು ತಮ್ಮ ಮನೆ, ನೆರೆಹೊರೆ ಹಾಗೂ ಸಮುದಾಯದಲ್ಲಿ ಮತದಾರರ ನೋಂದಣಿ ಕುರಿತು ಜಾಗೃತಿ ಮೂಡಿಸುವ ಮೂಲಕ ಪ್ರಜಾಪ್ರಭುತ್ವ ಬಲಪಡಿಸುವಲ್ಲಿ ಪ್ರಮುಖ ಪಾತ್ರವಹಿಸಬೇಕು ಎಂದು ಅವರು ಹೇಳಿದರು.

ಜಾಥಾದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಎಸ್.ಕೆ. ಹವಾಲ್ದಾರ್, ಇಸಿಒ ಆರ್.ಬಿ. ಜೋಶಿ, ಸಿಆರ್‌ಪಿಗಳಾದ ಉಮೇಶ್ ನೇಕಾರ್, ಎನ್.ಎ. ಮುಲ್ಲಾ, ತಾಲೂಕು ಪಂಚಾಯಿತಿ ಸಿಬ್ಬಂದಿ ಶ್ರೀಕಾಂತ, ಶಿಕ್ಷಕರಾದ ಪಿ.ಎಚ್. ಕೊಂಡಾಬಿಂಗಿ, ಆರ್.ಎಂ. ಕದಡಿ, ಲಕ್ಷ್ಮಣ ಪೂಜಾರ, ಕಾಂತೇಶ್ ಮುದುಗಲ್ ಸೇರಿದಂತೆ ಪಟ್ಟಣದ ವಿವಿಧ ಪ್ರೌಢಶಾಲೆಗಳ ಶಿಕ್ಷಕರು ಹಾಗೂ 300ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಎಸ್‌ಐಆರ್ ಜಾರಿಯಲ್ಲೇ ನಗರಸಭೆ.....

ನಗರಸಭೆಯ ಸುಮಾರು ರೂ.10 ಲಕ್ಷ ಹಣವನ್ನು ಈ ಪ್ರವಾಸಕ್ಕೆ ಖರ್ಚು ಮಾಡಲಾಗಿದೆ ಎಂದು ಆರೋಪಿಸಿರುವ ಅವರು, ಬೆಂಗಳೂರು, ಮೈಸೂರು, ಹುಬ್ಬಳ್ಳಿ ಸೇರಿದಂತೆ ರಾಜ್ಯದಲ್ಲೇ ಉತ್ತಮ ನಗರ ಸ್ಥಳೀಯ ಸಂಸ್ಥೆಗಳಿದ್ದಾಗ ಇಂದೋರ್‌ಗೆ ತೆರಳುವ ಅಗತ್ಯವೇನು ಎಂದು ಅವರು ಪ್ರಶ್ನಿಸಿದ್ದಾರೆ.

ಈ ಹಿಂದೆ ವಿದೇಶ ಹಾಗೂ ಇತರ ನಗರಗಳಿಗೆ ಅಧ್ಯಯನ ಪ್ರವಾಸ ಕೈಗೊಂಡಿದ್ದರೂ ಗದಗ–ಬೆಟಗೇರಿ ನಗರದ ಸ್ವಚ್ಛತೆಯಲ್ಲಿ ಯಾವುದೇ ಬದಲಾವಣೆ ಕಂಡುಬಂದಿಲ್ಲ. ನಗರವನ್ನು ಸ್ವಚ್ಛವಾಗಿಡಲು ಪೌರ ಕಾರ್ಮಿಕರೇ ಶ್ರಮಿಸುತ್ತಿರುವಾಗ ಅಧಿಕಾರಿಗಳ ಪ್ರವಾಸದಿಂದ ಯಾವುದೇ ಪ್ರಯೋಜನವಿಲ್ಲ ಎಂದು ದೂರಿದರು.

ಪ್ರವಾಸಕ್ಕೆ ಖರ್ಚಾದ ಹಣವನ್ನು ಸಂಬಂಧಪಟ್ಟ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳಿಂದಲೇ ವಸೂಲಿ ಮಾಡಬೇಕು. ಈ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರಿಗೆ ಪತ್ರ ಬರೆದಿದ್ದು, ರಾಜ್ಯ ಚುನಾವಣಾ ಆಯೋಗಕ್ಕೂ ದೂರು ಸಲ್ಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

### ರತ್ನಾಬಾಯಿ ಉಪಮಹಾಪೌರರಾಗಿ.....

ಸ್ಪರ್ಧಿಸಿದ್ದ 6ನೇ ವಾರ್ಡ್ ಸದಸ್ಯೆ ದಿಲಷಾದ್ ಬೇಗಂ ನದಾಫ್ 35 ಮತಗಳನ್ನು ಹಾಗೂ 76ನೇ ವಾರ್ಡ್ ಸದಸ್ಯೆ ವಹೀದಾ ಖಾನಂ ಅಲಾಭಕ್ಷ ಕಿತ್ತೂರು 3 ಮತಗಳನ್ನು ಪಡೆದರು.

ಮಹಾಪೌರ ಹಾಗೂ ಉಪಮಹಾಪೌರ ಚುನಾವಣೆಯಲ್ಲಿ ಸದಸ್ಯರು ಕೈ ಎತ್ತುವ ಮೂಲಕ ಮತ ಚಲಾಯಿಸಿದರು. ಚುನಾವಣೆಗೆ ಮಹಾನಗರ ಪಾಲಿಕೆ ಸದಸ್ಯರು, ಲೋಕಸಭೆ ಮತ್ತು ರಾಜ್ಯಸಭಾ ಸದಸ್ಯರು, ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಸೇರಿ ಒಟ್ಟು 92 ಮತದಾರರು ಇದ್ದು, ಅವರಲ್ಲಿ 88 ಮಂದಿ ಮತದಾನದಲ್ಲಿ ಪಾಲ್ಗೊಂಡರು. ನಾಲ್ವರು ಸದಸ್ಯರು ಗೈರುಹಾಜರಾಗಿದ್ದರು.

ಚುನಾವಣಾ ಪ್ರಕ್ರಿಯೆಯಲ್ಲಿ ಹೆಚ್ಚುವರಿ ಪ್ರಾದೇಶಿಕ ಆಯುಕ್ತ ಎಸ್.ಎಸ್. ಬಿರಾದಾರ ಹಾಗೂ ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ರುದ್ರೇಶ್ ಗಾಳಿ ಉಪಸ್ಥಿತರಿದ್ದರು.

# ಫ.ಗು. ಹಳಕಟ್ಟಿ ಜಯಂತಿ ಅಂಗವಾಗಿ ಉಪನ್ಯಾಸ ಇಂದು

**ವಿಜಯಸಾಕ್ಷಿ ಸುದ್ದಿ, ಗದಗ**



ವಚನ ಸಂಶೋಧನೆಯ ಪಿತಾಮಹ ಡಾ. ಫ.ಗು. ಹಳಕಟ್ಟಿ ಅವರ 146ನೇ ಜಯಂತಿ ಅಂಗವಾಗಿ 'ವಚನ ಸಾಹಿತ್ಯ ಸಂರಕ್ಷಣೆ' ಕುರಿತು ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಜುಲೈ 5ರಂದು ಬೆಳಿಗ್ಗೆ 10 ಗಂಟೆಗೆ ನಗರದ ಶಿವಾನಂದನಗರದ ಬಸವ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ.

ಬಸವದಳದ 1705ನೇ ಶರಣ ಸಂಗಮದ ಅಂಗವಾಗಿ ನಡೆಯುವ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ವಿ.ಕೆ. ಕರೇಗೌಡ್ರ ವಹಿಸಲಿದ್ದು, ಡಾ. ಎಂ.ಎನ್. ಕಲಬುರ್ಗಿ ಅಧ್ಯಯನ ಸಂಸ್ಥೆ, ಜಗದ್ಗುರು ತೋಂಟದಾರ್ಯ ಮಠದ ಕಾರ್ಯದರ್ಶಿ ಎಸ್.ಬಿ. ಗೌಡರ ಅವರು 'ವಚನ ಸಾಹಿತ್ಯ ಸಂರಕ್ಷಣೆ' ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಬಸವದಳದ ಕಾರ್ಯಾಧ್ಯಕ್ಷ ಪ್ರಕಾಶ ಅಸುಂಡಿ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಬಿ.ಜಿ. ಅಣ್ಣಿಗೇರಿ ಗುರುಗಳ ಶಿಕ್ಷಣ ಸೇವೆ ಸ್ಮರಿಸಿದ ವ್ಹಿ.ವ್ಹಿ. ನಡುವಿನಮನಿ

# ಗುರುಕುಲ ಪರಂಪರೆಯ 'ಅಕ್ಷರ ದಾಸೋಹ' ಇಂದಿಗೂ ಜೀವಂತ



"-ಬಿ.ಜಿ. ಅಣ್ಣಿಗೇರಿ ಗುರುಗಳು ಆರಂಭಿಸಿದ ಗುರುಕುಲ ಪರಂಪರೆ ಇಂದಿಗೂ ಅಕ್ಷರ ದಾಸೋಹದ ಮೂಲಕ ಸಾವಿರಾರು ವಿದ್ಯಾರ್ಥಿಗಳ ಬದುಕು ರೂಪಿಸುತ್ತಿದೆ. ಇಂತಹ ಶಿಕ್ಷಣ ಸೇವೆ ಸಮಾಜಕ್ಕೆ ಮಾದರಿಯಾಗಿದೆ."

**-ವ್ಹಿ.ವ್ಹಿ. ನಡುವಿನಮನಿ**
**ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ**

ವಿಜಯಸಾಕ್ಷಿ ಸುದ್ದಿ, ಗದಗ

ಶಿಕ್ಷಣ ಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳು ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆ ಅನನ್ಯವಾಗಿದ್ದು, ಅವರು ಆರಂಭಿಸಿದ ಗುರುಕುಲ ಮಾದರಿಯ ಆಶ್ರಮದಲ್ಲಿ ಇಂದಿಗೂ ಅನುಭವಿ ಶಿಕ್ಷಕರಿಂದ ನಿರಂತರ 'ಅಕ್ಷರ ದಾಸೋಹ' ನಡೆಯುತ್ತಿರುವುದು ಅಭಿನಂದನೀಯ ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವ್ಹಿ.ವ್ಹಿ. ನಡುವಿನಮನಿ ಹೇಳಿದರು.

ಗದಗ ತಾಲೂಕಿನ ಹಾತಲಗೇರಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಶುಕ್ರವಾರ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಐದು ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ, ಅಭಿನಂದನಾ ಪತ್ರ, ಕಾಲೇಜು ಬ್ಯಾಗ್ ಹಾಗೂ ಸಿಹಿ ವಿತರಿಸಿ ಅವರು ಮಾತನಾಡಿದರು.

ಶಿಕ್ಷಕರಾಗಿ ಹಾಗೂ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸುತ್ತಿದ್ದ ಅಣ್ಣಿಗೇರಿ ಗುರುಗಳು ತಮ್ಮ ವಾಸದ ಕೊಠಡಿಯಲ್ಲಿ ಕೆಲ ವಿದ್ಯಾರ್ಥಿಗಳಿಗೆ ಟ್ಯೂಷನ್ ಹೇಳುವ ಮೂಲಕ ಆರಂಭಿಸಿದ ಶಿಕ್ಷಣ ಸೇವೆ, ನಂತರ ಗುರುಕುಲ ಮಾದರಿಯ ಆಶ್ರಮವಾಗಿ ಬೆಳೆದು ಸಾವಿರಾರು ವಿದ್ಯಾರ್ಥಿಗಳಿಗೆ ದಾರಿದೀಪವಾಗಿದೆ. ಅವರ ಶಿಷ್ಯರು ಇಂದಿಗೂ ಆ ಪರಂಪರೆಯನ್ನು ಮುಂದುವರಿಸಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್. ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಶಿವಾನಂದ ಪೂಜಾರ ವಹಿಸಿದ್ದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿಯಲ್ಲಿ ಮೊದಲ ಐದು ಸ್ಥಾನ ಪಡೆದ ಸತೀಶ ಪೂಜಾರ, ಯಶೋಧಾ ಆಲೂರ, ರಶ್ಮಿ ಬಾರಕೇರ, ಧನರಾಜ ಬೆಂತೂರ ಹಾಗೂ ರೇಣುಕಾ ಕುರುಬರ ಅವರಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ವೇದಿಕೆಯಲ್ಲಿ ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಶಂಕರ ಹಡಗಲಿ, ಪ್ರತಿಷ್ಠಾನದ ಕಾರ್ಯದರ್ಶಿ ಸುಭಾಸಚಂದ್ರ ಬೆಟ್ಟದೂರ, ಶಿವಾನಂದ ಕತ್ತಿ, ನೇಹಾ ಖಟವಟೆ, ಜ್ಯೋತಿ ವಡಗೇರಿ, ಮಂಜುನಾಥ ಕುರಬರ ಉಪಸ್ಥಿತರಿದ್ದರು.

ಸತೀಶ ಮೇಲ್ಮನಿ ಪ್ರಾರ್ಥಿಸಿದರು. ಸುಮಿತ್ರಾ ಮೇತ್ರಿ ಸ್ವಾಗತಿಸಿದರು. ಲಿಂಗನಗೌಡ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ವಿಜಯಲಕ್ಷ್ಮಿ ರಾಠೋಡ ವಂದಿಸಿದರು. ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಸದಸ್ಯರು, ಗ್ರಾಮದ ಗಣ್ಯರು, ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ನಿಖರ ಮಾಹಿತಿ ನೀಡಿ, ಹಾರಿಕೆ ವರದಿ ಬೇಡ; ಅಧಿಕಾರಿಗಳಿಗೆ ಕಂಬಾಳಿಮಠ ಎಚ್ಚರಿಕೆ

# ಅಧಿಕಾರಿಗಳ ಅಂಕಿ-ಅಂಶದಲ್ಲಿ ವ್ಯತ್ಯಾಸ: ತಾಪಂ ಸಭೆಯಲ್ಲಿ ತರಾಟೆ




ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆಗಾಗಿ ಶನಿವಾರ ಶಿರಹಟ್ಟಿ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಹಾಗೂ ತಾಲೂಕು ಪಂಚಾಯತ್ ಆಡಳಿತಾಧಿಕಾರಿ ಎ.ಎ. ಕಂಬಾಳಿಮಠ ಅವರ ಅಧ್ಯಕ್ಷತೆಯಲ್ಲಿ ಸಾಮಾನ್ಯ ಸಭೆ ನಡೆಯಿತು.

ಸಭೆಯಲ್ಲಿ ತೋಟಗಾರಿಕೆ ಇಲಾಖೆಯ ಅಧಿಕಾರಿ, ತಾಲೂಕಿನಲ್ಲಿ ತೋಟಗಾರಿ-ಕೆ ಬೆಳೆಗಳ ಬಿತ್ತನೆ ಆಗಿಲ್ಲ ಎಂದು ಮಾಹಿತಿ ನೀಡುತ್ತಿದ್ದಂತೆ ಮಧ್ಯಪ್ರವೇಶಿಸಿದ ಎ.ಎ. ಕಂಬಾಳಿಮಠ, "ಜಿಲ್ಲಾ ಮಟ್ಟದ ಜಂಟಿ ನಿರ್ದೇಶಕರು ಬಿತ್ತನೆಯಾಗಿದೆ ಎಂದು ವರದಿ ನೀಡಿದ್ದಾರೆ. ಹಾಗಾದರೆ ಸರಿಯಾದ ಮಾಹಿತಿ ಯಾವುದು? ಅಧಿಕಾರಿಗಳು ಸಭೆಗೆ ಬರುವಾಗ ಸಂಪೂರ್ಣ ಹಾಗೂ ನಿಖರ ಅಂಕಿ-ಅಂಶಗಳೊಂದಿಗೆ ಹಾಜರಾಗಬೇಕು. ಹಾರಿಕೆ ಅಂಕಿ-ಅಂಶಗಳನ್ನು ನೀಡಬಾರದು," ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ತಾಲೂಕಿನಲ್ಲಿ ಜೂನ್ 1ರಿಂದ ಜುಲೈ 4ರವರೆಗೆ 102 ಮಿ.ಮೀ. ವಾಡಿಕೆ ಮಳೆಯ ಬದಲಿಗೆ 78 ಮಿ.ಮೀ. ಮಾತ್ರ ಮಳೆಯಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಶಿವಕುಮಾರ ಕಾಶಪ್ಪನವರ ಮಾಹಿತಿ ನೀಡಿದರು. ಈಗಾಗಲೇ 2,200 ಹೆಕ್ಟೇರ್ ಹೆಸರು ಹಾಗೂ 27,000 ಹೆಕ್ಟೇರ್ ಗೋವಿನಜೋಳ ಬಿತ್ತನೆಯಾಗಿದ್ದು, 385 ಟನ್ ಯೂರಿಯಾ ಮತ್ತು 38 ಟನ್ ಡಿಎಪಿ ಗೊಬ್ಬರ ಸಂಗ್ರಹವಿದೆ ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ಕಂಬಾಳಿಮಠ, ಕಡಿಮೆ ಮಳೆಯ ಹಿನ್ನೆಲೆಯಲ್ಲಿ ಬೆಳೆ ಹಾನಿಯಾಗದಂತೆ ರೈತರಲ್ಲಿ ಜಾಗೃತಿ ಮೂಡಿಸಬೇಕು. ಬೆಳೆ ವಿಮೆ ನೋಂದಣಿ ಕುರಿತು ವ್ಯಾಪಕ ಅರಿವು ಮೂಡಿಸುವ ಕಾರ್ಯ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಿ. ದೊಡ್ಡಮನಿ, ಯೋಜನಾಧಿಕಾರಿ ಎಚ್.ಎ. ಕೊಂಡಿಕೊಪ್ಪ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಪರಿಹಾರದಿಂದ ಹಿಂದೆ ಸರಿಯುವ ಕಾಂಗ್ರೆಸ್ ರೈತರಿಗೆ ದ್ರೋಹ: ಎಎಪಿ ಜಿಲ್ಲಾ ಅಧ್ಯಕ್ಷ ಡಾ. ದಾದಾಪೀರ್ ಕಲೇಗಾರ್ ವಾಗ್ದಾಳಿ

# ಬಿತ್ತನೆ ಮಾಡಬೇಡಿ ಎನ್ನುವ ಸರ್ಕಾರ ರೈತರ ಪಾಲಿಗೆ ಶಾಪ!



ವಿಜಯಸಾಕ್ಷಿ ಸುದ್ದಿ, ಗದಗ

"ಬೆಳೆಯನ್ನೇ ಬೆಳೆಯಬೇಡಿ, ಪರಿಹಾರವನ್ನೇ ಕೇಳಬೇಡಿ" ಎಂಬ ರೀತಿಯ ಸಂದೇಶ ನೀಡುವ ರಾಜ್ಯ ಸರ್ಕಾರದ ನಿಲುವು ರೈತ ವಿರೋಧಿ, ಅಮಾನವೀಯ ಹಾಗೂ ಖಂಡನೀಯ ಎಂದು ಆಮ್ ಆದ್ಮಿ ಪಕ್ಷದ ಗದಗ ಜಿಲ್ಲಾ ಅಧ್ಯಕ್ಷ ಡಾ. ದಾದಾಪೀರ್ ಕಲೇಗಾರ್ ಆರೋಪಿಸಿದ್ ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ರೈತರ ಸಂಕಷ್ಟದ ಸಂದರ್ಭದಲ್ಲಿ ಅವರ ಬೆನ್ನಿಗೆ ನಿಲ್ಲುವ ಬದಲು ಜವಾಬ್ದಾರಿಯಿಂದ ಹಿಂದೆ ಸರಿಯಲು ಯತ್ನಿಸುತ್ತಿದೆ ಎಂದು ಟೀಕಿಸಿದರು.

ಮಳೆ ಕೊರತೆ, ಅತಿವೃಷ್ಟಿ, ಬೆಲೆ ಕುಸಿತ, ಗೊಬ್ಬರ ಕೊರತೆ, ಕಳಪೆ ಬೀಜ ಪೂರೈಕೆ ಹಾಗೂ ಸಾಲದ ಹೊರೆಗಳಿಂದ ರೈತರು ಈಗಾಗಲೇ ಸಂಕಷ್ಟದಲ್ಲಿದ್ದಾರೆ.

ಇಂತಹ ಪರಿಸ್ಥಿತಿಯಲ್ಲಿ ರೈತರಿಗೆ ಬೆಂಬಲ ನೀಡುವ ಬದಲು ಬಿತ್ತನೆ ಮಾಡದಂತೆ ಹೇಳುವುದು ರೈತರನ್ನು ಆತ್ಮವಿಶ್ವಾಸ ಕಳೆದುಕೊಳ್ಳುವಂತೆ ಮಾಡುವ ನಿರ್ಧಾರವಾಗಿದೆ ಎಂದು ಅವರು ಆರೋಪಿಸಿದರು.

ಚುನಾವಣೆ ವೇಳೆ ರೈತರ ಪರವಾಗಿ ಹಲವು ಭರವಸೆಗಳನ್ನು ನೀಡಿದ್ದ ಕಾಂಗ್ರೆಸ್ ಸರ್ಕಾರ, ಅಧಿಕಾರಕ್ಕೆ ಬಂದ ಬಳಿಕ ರೈತರ ಸಮಸ್ಯೆಗಳನ್ನು ನಿರ್ಲಕ್ಷಿಸಿ ಬೆಳೆ ಹಾನಿ ಪರಿಹಾರದ ಹೊಣೆಗಾರಿಕೆಯಿಂದಲೂ ಹಿಂದೆ ಸರಿಯುತ್ತಿದೆ. ಇದು ರೈತ ಸಮುದಾಯಕ್ಕೆ ಮಾಡುತ್ತಿರುವ ದ್ರೋಹ ಎಂದು ಕಿಡಿಕಾರಿದರು.

**ತಕ್ಷಣ ನಿರ್ಧಾರ ಹಿಂಪಡೆಯಲಿ:** ಸರ್ಕಾರ ರೈತ ವಿರೋಧಿ ನಿರ್ಧಾರವನ್ನು ಕೂಡಲೇ ಹಿಂಪಡೆಯಬೇಕು. ಬೆಳೆ ಹಾನಿಗೊಳಗಾದ ಎಲ್ಲ ರೈತರಿಗೆ, ಅವರು ಬೆಳೆ ವಿಮೆ ಪಡೆದಿರಲಿ ಅಥವಾ ಪಡೆಯದಿರಲಿ, ಸಮರ್ಪಕ ಪರಿಹಾರ ಘೋಷಿಸಬೇಕು. ಬರ, ಅತಿವೃಷ್ಟಿ ಹಾಗೂ ಪ್ರಕೃತಿ ವಿಕೋಪದಿಂದ ಸಂಕಷ್ಟದಲ್ಲಿರುವ ರೈತರಿಗೆ ತುರ್ತು ವಿಶೇಷ ಪ್ಯಾಕೇಜ್ ಪ್ರಕಟಿಸಬೇಕು ಎಂದು ಅವರು ಒತ್ತಾಯಿಸಿದರು.

"ರೈತರನ್ನು ಸಂಕಷ್ಟದ ಸಮಯದಲ್ಲಿ ಕೈಬಿಡುವ ಸರ್ಕಾರವನ್ನು ಆಮ್ ಆದ್ಮಿ ಪಕ್ಷ ತೀವ್ರವಾಗಿ ಖಂಡಿಸುತ್ತದೆ. ಸರ್ಕಾರ ತನ್ನ ನಿರ್ಧಾರವನ್ನು ಮರುಪರಿಶೀಲಿಸಿ ರೈತಪರ ನಿಲುವು ತಾಳಬೇಕು."

**-ಡಾ. ದಾದಾಪೀರ್ ಕಲೇಗಾರ್**
**ಜಿಲ್ಲಾ ಅಧ್ಯಕ್ಷರು, ಆಮ್ ಆದ್ಮಿ ಪಕ್ಷ**

# ಬೆಳೆ ವಿಮೆ ನೋಂದಣಿಗೆ ಜುಲೈ 31 ಅಂತಿಮ ಗಡುವು




ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಕರ್ನಾಟಕ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಬೆಳೆ ವಿಮೆ ನೋಂದಣಿಗೆ ಜುಲೈ 31 ಕೊನೆಯ ದಿನವಾಗಿದ್ದು, ತಾಲೂಕಿನ ರೈತರು ನಿಗದಿತ ಅವಧಿಯೊಳಗೆ ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳಬೇಕು ಎಂದು ಸಹಾಯಕ ಕೃಷಿ ನಿರ್ದೇಶಕ ಎಸ್.ಬಿ. ಪಾಟೀಲ್ ತಿಳಿಸಿದ್ದಾರೆ.

ಪ್ರಕಟಣೆಯಲ್ಲಿ ಅವರು ತಿಳಿಸಿರುವಂತೆ, ಪ್ರಕೃತಿ ವಿಕೋಪ, ಇಳುವರಿ ನಷ್ಟ, ಬಿತ್ತನೆ ವಿಳಂಬ, ಬೆಳವಣಿಗೆಯ ಹಂತದಲ್ಲಿ ಸಂಭವಿಸುವ ಹಾನಿ, ಕೊಯ್ಲಿನ ನಂತರದ ನಷ್ಟ ಹಾಗೂ ಸ್ಥಳೀಯ ವಿಪತ್ತುಗಳಿಂದಾಗುವ ಬೆಳೆ ಹಾನಿಗೆ ಆರ್ಥಿಕ ಪರಿಹಾರ ನೀಡುವ ಉದ್ದೇಶದಿಂದ ಈ ಯೋಜನೆ ಜಾರಿಯಲ್ಲಿದೆ.

ಹಗರಿಬೊಮ್ಮನಹಳ್ಳಿ ತಾಲೂಕಿನ ಗ್ರಾಮ ಪಂಚಾಯಿತಿ ಹಾಗೂ ಹೋಬಳಿ ವ್ಯಾಪ್ತಿಯಲ್ಲಿ ಪ್ರಮುಖ ಬೆಳೆಗಳಾದ ಮೆಕ್ಕೆಜೋಳ, ಈರುಳ್ಳಿ, ಕೆಂಪು ಮೆಣಸಿನಕಾಯಿ, ಜೋಳ, ತೆ-ೂಗರಿ, ಸೂರ್ಯಕಾಂತಿ, ಹತ್ತಿ, ರಾಗಿ ಹಾಗೂ ಸಜ್ಜಿ ಬೆಳೆಗಳನ್ನು ಬೆಳೆಯುವ ರೈತರು ಯೋಜನೆಯ ಸೌಲಭ್ಯ ಪಡೆಯಬಹುದು.

ರೈತರು ಅರ್ಜಿ ಸಲ್ಲಿಸುವಾಗ ತಮ್ಮ ಬೆಳೆ ಮಳೆಯಾಶ್ರಿತವೋ ಅಥವಾ ನೀರಾವರಿ ಬೆಳೆವೋ ಎಂಬುದನ್ನು ಸರಿಯಾಗಿ ನಮೂದಿಸಬೇಕು. ಬೆಳೆ ಸಾಲ ಪಡೆದ ಹಾಗೂ ಬೆಳೆ ಸಾಲ ಪಡೆಯದ ರೈತರು ಅಧಿಸೂಚಿತ ಬೆಳೆಗಳಿಗೆ ಯೋಜನೆಯಲ್ಲಿ ಭಾಗವಹಿಸಲು ಅವಕಾಶವಿದೆ.

ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಪ್ರಸಕ್ತ ಸಾಲಿನ ಪಹಣಿ, ಬ್ಯಾಂಕ್ ಖಾತೆ ಪುಸ್ತಕ, ಆಧಾರ್ ಕಾರ್ಡ್ ಹಾಗೂ ಬೆಳೆ ಸಾಲ ಪಡೆಯದಿರುವ ಕುರಿತು ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು.

ಯೋಗ ಬದುಕಿನ ಶಿಸ್ತು, ಪರಿಸರ ಉಳಿಸುವುದು ಪ್ರತಿಯೊಬ್ಬರ ಹೊಣೆ: ಹಾಲಕೇರಿ ಅನ್ನದಾನೀಶ್ವರ ಶ್ರೀ

# ಅಭಿವೃದ್ಧಿ ಹೆಸರಲ್ಲಿ ಪ್ರಕೃತಿ ನಾಶ ಮನುಷ್ಯ ಧರ್ಮವಲ್ಲ



"ಯೋಗವಿರಲಿ, ಜೀವನವಿರಲಿ, ಕ್ರಮ ಮತ್ತು ಶಿಸ್ತು ಅತ್ಯಗತ್ಯ. ಗುರುಗಳ ಮಾರ್ಗದರ್ಶನದಲ್ಲಿ ಯೋಗಾಭ್ಯಾಸ ಮಾಡಿದಾಗ ಮಾತ್ರ ಯೋಗದ ನಿಜವಾದ ಫಲ ದೊರೆಯುತ್ತದೆ."

**-ಪೂಜ್ಯ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು,**
**ಹಾಲಕೇರಿ ಅನ್ನದಾನೀಶ್ವರ ಸಂಸ್ಥಾನಮಠ**

ವಿಜಯಸಾಕ್ಷಿ ಸುದ್ದಿ, ಗದಗ

ಯೋಗ ಎಂದರೆ ಕೇವಲ ದೈಹಿಕ ವ್ಯಾಯಾಮವಲ್ಲ, ನಮ್ಮ ಸುತ್ತಲಿನ ಪರಿಸರ ಹಾಗೂ ಸಮಾಜದೊಂದಿಗೆ ಸಾಮರಸ್ಯದಿಂದ ಬದುಕುವ ಜೀವನ ಪದ್ಧತಿಯಾಗಿದೆ. ದೇವರು ಸೃಷ್ಟಿಸಿದ ಪ್ರಕೃತಿಯನ್ನು ಅಭಿವೃದ್ಧಿಯ ಹೆಸರಿನಲ್ಲಿ ಹಾಳು ಮಾಡುವುದು ಮನುಷ್ಯ ಧರ್ಮವಲ್ಲ ಎಂದು ಹಾಲಕೇರಿ ಅನ್ನದಾನೀಶ್ವರ ಸಂಸ್ಥಾನಮಠದ ಪೂಜ್ಯ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

ನಗರದ ರಾಜೀವಗಾಂಧಿ ನಗರದ ಈಶ್ವರ ಬಡಾವಣೆಯ ಈಶ್ವರ ಸಭಾಭವನದಲ್ಲಿ ಈಶ್ವರ ಸೇವಾ ಟ್ರಸ್ಟ್, ಗದಗ-ಬೆಟಗೇರಿ ನಗರಸಭೆ, ಕೆ.ಎಚ್. ಪಾಟೀಲ ಕಲಾ ವಿಜ್ಞಾನ ಕೇಂದ್ರ, ಪತಂಜಲಿ ಜಿಲ್ಲಾ ಯೋಗ ಸಮಿತಿ, ಧರ್ಮಸ್ಥಳ ಸಂಸ್ಥೆ ಹಾಗೂ ಜಿಲ್ಲಾ ಆಯುಷ್ ಇಲಾಖೆ ಆಶ್ರಯದಲ್ಲಿ ನಡೆದ 12ನೇ ಅಂತರರಾಷ್ಟ್ರೀಯ ಯೋಗ ಹಾಗೂ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಜೂನ್ 21ರಂದು ಯೋಗ ದಿನ ಆಚರಿಸುವ ಮಹತ್ವವನ್ನು ವಿವರಿಸಿದ ಶ್ರೀಗಳು, ಮನುಷ್ಯನು ದಿನಕ್ಕೆ ಸರಾಸರಿ 21,600 ಬಾರಿ ಉಸಿರಾಡುತ್ತಾನೆ. ಜೂನ್ 21 ಈ ಉಸಿರಾಟದ ಸಂಕೇತವಾಗಿದೆ ಎಂದು ಹೇಳಿದರು. ಯೋಗಾಭ್ಯಾಸವನ್ನು ಗುರುಗಳ ಮಾರ್ಗದರ್ಶನದಲ್ಲಿ ಮಾತ್ರ ಮಾಡಬೇಕು. ಟಿವಿ ಅಥವಾ ಮೊಬೈಲ್ ನೋಡಿ ಯೋಗ ಮಾಡುವುದರಿಂದ ಆರೋಗ್ಯ ಸಮಸ್ಯೆಗಳು ಉಂಟಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಯೋಗವು ಭಾರತೀಯ ಋಷಿಮುನಿಗಳ ಅಮೂಲ್ಯ ಕೊಡುಗೆಯಾಗಿದ್ದು, ಅದನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದ ಕೀರ್ತಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸಲ್ಲುತ್ತದೆ ಎಂದರು. 2014ರಲ್ಲಿ ವಿಶ್ವಸಂಸ್ಥೆಯಲ್ಲಿ ಮೋದಿ ಅವರು ಯೋಗದ ಮಹತ್ವ ಪ್ರತಿಪಾದಿಸಿದ ಹಿನ್ನೆಲೆಯಲ್ಲಿ ಇಂದು ವಿಶ್ವದಾದ್ಯಂತ ಯೋಗ ದಿನಾಚರಣೆ ಆಚರಿಸಲಾಗುತ್ತಿದೆ ಎಂದು ಹೇಳಿದರು.

ಪರಿಸರ ಹಾನಿ ಕುರಿತು ಕಳವಳ ವ್ಯಕ್ತಪಡಿಸಿದ ಅವರು, ವಾಯು, ನೀರು ಮತ್ತು ಭೂಮಿಯ ಮಾಲಿನ್ಯ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದ್ದು, ಪ್ರಕೃತಿ ಸಂರಕ್ಷಣೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಪತಂಜಲಿ ಯೋಗ ಸಮಿತಿಯ ರಾಜ್ಯ ಪ್ರಭಾರಿ ಭವರಲಾಲ ಆರ್ಯ, ಜಿಲ್ಲಾ ಪಂಚ ಗ್ಯಾರಂಟಿ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಕೆಎಸ್‌ಎಸ್ ಸಮಿತಿ ಕಾರ್ಯದರ್ಶಿ ರವಿ ದಂಡಿನ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಹಟ್ಟಿ, ಜಿಲ್ಲಾ ಆಯುಷ್ ಅಧಿಕಾರಿ ಜುಬೇದಾ ತಿಗಳೇರ ಯೋಗ ಹಾಗೂ ಪರಿಸರ ಸಂರಕ್ಷಣೆಯ ಮಹತ್ವ ಕುರಿತು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಈಶ್ವರ ಸೇವಾ ಟ್ರಸ್ಟ್ ಅಧ್ಯಕ್ಷ ಎಂ.ಜಿ. ಸಂತೋಜಿ ವಹಿಸಿದ್ದರು. ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಯೋಗಾಭ್ಯಾಸಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಶಿಗ್ಲಿಯಲ್ಲಿ ಕಸಾಪ ಮನೆ-ಮನೆ ಸಾಹಿತ್ಯ ಕಾರ್ಯಕ್ರಮದಲ್ಲಿ ಚಂದ್ರು ಆಚಾರ್ಯ ಅಭಿಮತ

# ಶಿಲ್ಪಕಲೆ ಇತಿಹಾಸದ ಜೀವಂತ ಸಾಕ್ಷಿ



ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಾಹಿತ್ಯ ಮತ್ತು ಶಿಲ್ಪಕಲೆ ಪರಸ್ಪರ ಪೂರಕವಾದ ಕಲೆಗಳಾಗಿದ್ದು, ಶಿಲ್ಪಗಳು ಕೇವಲ ಕಲ್ಲಿನ ಕೆತ್ತನೆಗಳಲ್ಲ, ಅವು ಇತಿಹಾಸ, ಸಂಸ್ಕೃತಿ ಮತ್ತು ಪರಂಪರೆಯ ಜೀವಂತ ದಾಖಲೆಗಳಾಗಿವೆ ಎಂದು ಶಿಲ್ಪಿ ಚಂದ್ರು ಆಚಾರ್ಯ ಪತ್ತಾರ ಹೇಳಿದರು.

ಸಮೀಪದ ಶಿಗ್ಲಿ ಗ್ರಾಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಹೋಬಳಿ ಘಟಕದಿಂದ ಶುಕ್ರವಾರ ಆಯೋಜಿಸಿದ್ದ ಮನೆ-ಮನೆ ಸಾಹಿತ್ಯ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿ ಮಾತನಾಡಿದರು.

ಕಲ್ಲು, ಮರ ಹಾಗೂ ಲೋಹಗಳಿಗೆ ಜೀವ ತುಂಬುವ ಅಪರೂಪದ ಕಲೆಯೇ ಶಿಲ್ಪಕಲೆ. ರಾಮಾಯಣ, ಮಹಾಭಾರತ ಹಾಗೂ ಪುರಾಣಗಳ ಕಥೆಗಳು ಶಿಲ್ಪಕಲೆಗೆ ಸ್ಫೂರ್ತಿಯಾಗಿದ್ದು, ಬೇಲೂರು, ಹಳೇಬೀಡು, ಹಂಪಿಯಂತಹ ಐತಿಹಾಸಿಕ ತಾಣಗಳಲ್ಲಿ ಸಾಹಿತ್ಯ ಮತ್ತು ಶಿಲ್ಪಕಲೆಯ ಅದ್ಭುತ ಸಂಗಮವನ್ನು ಕಾಣಬಹುದಾಗಿದೆ. ಇತ್ತೀಚೆಗೆ ಅಯೋಧ್ಯೆಯ ಶ್ರೀರಾಮನ ಮೂರ್ತಿಗೂ ಶಿಲ್ಪಿಗಳು ತಮ್ಮ ಕೈಚಳಕದಿಂದ ಜೀವ ತುಂಬಿದ್ದು, ಶಿಲ್ಪಕಲೆಯ ಶ್ರೇಷ್ಠತೆಯನ್ನು ಮತ್ತೊಮ್ಮೆ ಜಗತ್ತಿಗೆ ಪರಿಚಯಿಸಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೋಬಳಿ ಘಟಕದ ಅಧ್ಯಕ್ಷ ರಾಜು ರಜಪೂತ ವಹಿಸಿದ್ದರು. ಕಸಾಪ ಹೋಬಳಿ ಘಟಕದ ನಿಕಟಪೂರ್ವ ಅಧ್ಯಕ್ಷ ಅಶೋಕ ಶಿರಹಟ್ಟಿ, ಈರಣ್ಣ ಅಕ್ಕೂರ, ಎನ್.ಡಿ. ಮೇಘಲಮನೆ, ಎಸ್.ಎಂ. ವಿರಕ್ತಮಠ, ರವೀಂದ್ರ ಹತ್ತಲಗೇರಿ, ಬಸವರಾಜ ಹಾಳಕೇರಿ, ಮಹಾದೇವ ಬಾದಾಮಿ, ಈರಣ್ಣ ಅಳ್ಳಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಂಜುನಾಥ ಸಾಂಬಾಜಿ ಕಾರ್ಯಕ್ರಮ ನಿರೂಪಿಸಿದರು. ಮಂಜುನಾಥ ಗೋಣಪ್ಪನವರ ವಂದಿಸಿದರು. ಶಿಗ್ಲಿ ಗ್ರಾಮದ ಕಸಾಪ ಅಜೀವ ಸದಸ್ಯರು ಹಾಗೂ ಕನ್ನಡಾಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಇಂದು 'ಮನೋಹಲರಿ' ಕವನ ಸಂಕಲನ ಲೋಕಾರ್ಪಣೆ

ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ಸರ್ಕಾರಿ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘ, ಲಕ್ಷ್ಮೇಶ್ವರ ಹಾಗೂ ವಿವಿಧ ಇಲಾಖೆಗಳ ನಿವೃತ್ತ ನೌಕರರು ಮತ್ತು ಹಿರಿಯರ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ನಿವೃತ್ತ ಶಿಕ್ಷಕ ಷ.ಗು. ಮಾದಾಪುರಮಠ ಅವರ ನಾಲ್ಕನೇ ಕವನ ಸಂಕಲನ 'ಮನೋಹಲರಿ' ಲೋಕಾರ್ಪಣೆ ಸಮಾರಂಭ ಜುಲೈ 5ರಂದು ಬೆಳಿಗ್ಗೆ 10 ಗಂಟೆಗೆ ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.1ರಲ್ಲಿ ನಡೆಯಲಿದೆ.

ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಬಿ.ಎಸ್. ಈಳಿಗೇರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಕೃತಿಯನ್ನು ಲೋಕಾರ್ಪಣೆ ಮಾಡಲಿದ್ದಾರೆ.

ತಾಲೂಕು ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಗರಾಜ ಹಣಗಿ ಕೃತಿ ಪರಿಚಯ ಮಾಡಿಕೊಡಲಿದ್ದು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಿಗೇರ, ಸಾಹಿತಿಗಳಾದ ಸಿ.ಜಿ. ಹಿರೇಮಠ, ಪೂರ್ಣಾಜಿ ಖರಾಟೆ, ಕೃತಿಕಾರ ಷ.ಗು. ಮಾದಾಪುರಮಠ, ವಕೀಲ ಬಿ.ಎಸ್. ಸಂಶಿ, ವಿ.ಸಿ. ಹಿರೇಮಠ, ಶೋಭಾ ವೀರೇಶ ಹಿರೇಮಠ, ಮುಖ್ಯಶಿಕ್ಷಕ ಬಸವರಾಜ ಕುಂಬಾರ, ಡಿ.ಎನ್. ದೊಡ್ಡಮನಿ, ಚಂದ್ರಶೇಖರ ಪಾಟೀಲ, ಕಲಾವಿದ ಪ್ರವೀಣ ಗಾಯಕರ ಹಾಗೂ ಎಸ್.ವಿ. ಅಂಗಡಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಆತ್ಮ ಯೋಜನೆಯಡಿ ಬಿಟಿಎಂ, ಎಟಿಎಂ ಹುದ್ದೆಗಳಿಗೆ ಅರ್ಜಿ ಆಹ್ವಾನ

ವಿಜಯಸಾಕ್ಷಿ ಸುದ್ದಿ, ಗದಗ

2026-27ನೇ ಸಾಲಿನ ಕೃಷೋನ್ನತಿ, ಕೃಷಿ ವಿಸ್ತರಣೆ (ಆತ್ಮ) ಯೋಜನೆ ಅಡಿಯಲ್ಲಿ ಹೊಸದಾಗಿ ರಚನೆಯಾಗಿರುವ ತಾಲೂಕುಗಳಿಗೆ ನೇರಗುತ್ತಿಗೆ ಆಧಾರದ ಮೇಲೆ ತಾಲೂಕು ತಾಂತ್ರಿಕ ವ್ಯವಸ್ಥಾಪಕ (ೞಖಿಒ) ಎರಡು ಹುದ್ದೆಗಳು ಹಾಗೂ ಸಹಾಯಕ ತಾಂತ್ರಿಕ ವ್ಯವಸ್ಥಾಪಕ (ATM) ಒಂದು ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 6 ಕೊನೆಯ ದಿನವಾಗಿದೆ.

ಬಿಟಿಎಂ ಹುದ್ದೆಗೆ ಕೃಷಿ ಅಥವಾ ಕೃಷಿ ಸಂಬಂಧಿತ ವಿಷಯದಲ್ಲಿ ಸ್ನಾತಕೋತ್ತರ ಪದವಿಯೊಂದಿಗೆ ಗಣಕಯಂತ್ರ ಜ್ಞಾನ ಹೊಂದಿರಬೇಕು. ಜೊತೆಗೆ ಕೃಷಿ ಅಥವಾ ಸಂಬಂಧಿತ ಇಲಾಖೆಯಲ್ಲಿ ಎರಡು ವರ್ಷದ ಸೇವಾನುಭವ ಅಥವಾ ಕನಿಷ್ಠ ಐದು ವರ್ಷಗಳ ಎಟಿಎಂ ಸೇವಾನುಭವ ಕಡ್ಡಾಯವಾಗಿದೆ.

ಎಟಿಎಂ ಹುದ್ದೆಗೆ ಕೃಷಿ ಅಥವಾ ಕೃಷಿ ಸಂಬಂಧಿತ ವಿಷಯದಲ್ಲಿ ಪದವಿ ಅಥವಾ ಸ್ನಾತ-ಕೋತ್ತರ ಪದವಿ ಹಾಗೂ ಕನಿಷ್ಠ ಒಂದು ವರ್ಷದ ಸೇವಾನುಭವ ಹೊಂದಿರಬೇಕು.

ಆಸಕ್ತ ಅಭ್ಯರ್ಥಿಗಳು ಅರ್ಜಿ ನಮೂನೆಯೊಂದಿಗೆ ಛಾಯಾಚಿತ್ರ, ವಿದ್ಯಾರ್ಹತಾ ಪ್ರಮಾಣಪತ್ರಗಳು, ಆಧಾರ್ ಪ್ರತಿ ಹಾಗೂ ಅಗತ್ಯ ದಾಖಲೆಗಳನ್ನು ಜಂಟಿ ಕೃಷಿ ನಿರ್ದೇಶಕರ ಕಚೇರಿ, ಹುಡ್ಕೊ ಕಾಲೋನಿ, ನೌಕರ ಭವನ ಹತ್ತಿರ, ಮುಳಗುಂದ ರಸ್ತೆ, ಗದಗ-582103 ವಿಳಾಸಕ್ಕೆ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ 8217773915 ಸಂಖ್ಯೆಗೆ ಅಥವಾ ಉಪ ಯೋಜನಾ ನಿರ್ದೇಶಕರು, ಆತ್ಮ ಯೋಜನೆ, ಗದಗ ಅವರನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka